ಸಂಪುಟ : 8 ಸಂಚಿಕೆ : 245 ಪುಟ : 4 ಬೆಲೆ : 3.00 ರವಿವಾರ ನವ್ಹಂಬರ್ 05, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 8 Issue : 245 Pages : 4 Price : 3.00 Sunday November 05, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25




## ತೋಂಟದಾರ್ಯ ಮಠಕ್ಕೆ ಸಿಎಂ, ಡಿಸಿಎಂ ಭೇಟಿ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ತೋಂಟದಾರ್ಯ ಮಠಕ್ಕೆ ಶುಕ್ರವಾರ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಭೇಟಿ ನೀಡಿದರು. ಕರ್ನಾಟಕ 50ನೇ ನಾಮಕರಣ ಸಂಭ್ರಮದ ಅಂಗವಾಗಿ ನಗರದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದ ಬಳಿಕ ತೋಂಟ-ದಾರ್ಯ ಮಠಕ್ಕೆ ಭೇಟಿ ನೀಡಿದ ಅವರು ಲಿಂಗೈಕ್ಯ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಗದ್ದುಗೆಯ ದರ್ಶನ ಪಡೆದರು.

ಬಳಿಕ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಕಾನೂನು ಸಂಸದೀಯ ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ, ಶಾಸಕರಾದ ಜಿ.ಎಸ್. ಪಾಟೀಲ, ಎನ್.ಎಚ್. ಕೋನರಡ್ಡಿ, ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಟಿ.ಈಶ್ವರ, ಬಾಗಲಕೋಟೆಯ ಕಾಂಗ್ರೆಸ್ ಮುಖ್ಯಸ್ಥೆ ವೀಣಾ ಕಾಶಪ್ಪನವರ, ಶಿವಾನಂದ ಪಟ್ಟಣಶೆಟ್ಟರ, ಎಸ್.ಎಸ್. ಕಳಸಾಪೂರಶೆಟ್ರ, ಬಾಲಚಂದ್ರ ಭರಮಗೌಡರ, ಗಂಗಾಧರ ಹಿರೇಮಠ, ವಿರೂಪಾಕ್ಷಪ್ಪ ಬಳ್ಳೊಳ್ಳಿ, ವಿವೇಕಾನಂದಗೌಡ ಪಾಟೀಲ, ಅಮರೇಶ ಅಂಗಡಿ, ಮ್ಯಾನೇಜರ್ ಎಂ.ಎಸ್. ಅಂಗಡಿ, ಕೊಟ್ರೇಶ ಮೆಣಸಿನಕಾಯಿ ಮುಂತಾದವರಿದ್ದರು.

### ಬಿಜೆಪಿ ಬರ ಅಧ್ಯಯನ ತಂಡದೊಂದಿಗೆ ಗದುಗಿನಲ್ಲಿ ಮಾಜಿ ಸಚಿವ ಬಿ. ಶ್ರೀರಾಮುಲು ಪ್ರವಾಸ

# ಖುರ್ಚಿ ಗುದ್ದಾಟದಲ್ಲಿ ರಾಜ್ಯದ ಅಭಿವೃದ್ಧಿ ಕುಂಠಿತ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಭೀಕರ ಬರಗಾಲ ಎದುರಾಗಿದೆ. ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗಳ ಮೂಲಕ ಅಧಿಕಾರಕ್ಕೆ ಬಂದಿದೆ. ಮಹಿಳೆಯರು ಗ್ಯಾರಂಟಿ ಯೋಜನೆಗಳು ತಲುಪಿಲ್ಲ ಎನ್ನುತ್ತಿದ್ದಾರೆ. ಸಾಕಷ್ಟು ತಾಯಂದಿರು ಅಕ್ಕಿಯ ಬದಲಾಗಿ ಕೊಡುತ್ತಿರುವ ಹಣ ನಮಗೆ ಬೇಡ, ಅಕ್ಕಿಯನ್ನೇ ಕೊಡಿ ಎನ್ನುತ್ತಿದ್ದಾರೆ. ಆ ಭಾಗದಲ್ಲಿ ರೈತರು ಜಮೀನುಗಳಿಗೆ ನೀರು ಕೇಳುತ್ತಿದ್ದಾರೆ. ಗರ್ಭಿಣಿ ಮಹಿಳೆಯರು, ಮಕ್ಕಳಿಗೆ ಪೌಷ್ಠಿಕ ಆಹಾರ ಸಿಗುತ್ತಿಲ್ಲ. ಹೀಗೆಲ್ಲ ಇರುವಾಗ ನಮ್ಮ ಮುಖ್ಯಮಂತ್ರಿಗಳು ಮಾತ್ರ ಖುಷಿಯಿಂದ ಹಂಪಿಯಲ್ಲಿ ಕುಣಿದು ಕುಪ್ಪಳಿಸುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಮಾಜಿ ಸಚಿವ ಬಿ. ಶ್ರೀರಾಮುಲು ತೀವ್ರ ವಾಗ್ದಾಳಿ ನಡೆಸಿದರು.

ನಗರದ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ವಿರುದ್ಧ ಹರಿಹಾಯ್ದರು.



ಸಿಎಂ ಖುರ್ಚಿಗಾಗಿ ಸಾಕಷ್ಟು ಗುದ್ದಾಟ ನಡೆಯುತ್ತಿದೆ. ಹೈಕಮಾಂಡ್ ನಿರ್ಧಾರಕ್ಕೆ ಬದ್ಧನಾಗಿರುತ್ತೇನೆ ಎಂದು ಸಿದ್ದರಾಮಯ್ಯ ಹೇಳುತ್ತಿದ್ದಾರೆ. ಮತ್ತೊಮ್ಮೆ ನಾನೇ ಐದು ವರ್ಷ ಮುಖ್ಯಮಂತ್ರಿಯಾಗಿರುತ್ತೇನೆ ಅಂತಾರೆ. ಆದರೆ, ಡಿ.ಕೆ. ಶಿವಕುಮಾರ ಸಿಎಂ ಖುರ್ಚಿಯ ಮೇಲೆ ಕಣ್ಣಿಟ್ಟಿದ್ದಾರೆ. ಸಿಎಂ ಖುರ್ಚಿಗೆ ಅಂಟಿಕೊಂಡು ಸಿದ್ದರಾಮಯ್ಯ ಕುಳಿತಿದ್ದಾರೆ. ಒಂದು ಕಡೆ ಪರಮೇಶ್ವರ ನಾನೇ ದಲಿತ ಸಿಎಂ ಅಂತಾರೆ. ಸಣ್ಣ ಖರ್ಗೆ ಕೂಡ ನಾನು ಸಿಎಂ ಅಂತಾರೆ. ಇವರೆಲ್ಲರ ಸಿಎಂ ಖುರ್ಚಿ ಗುದ್ದಾಟದಲ್ಲಿ ಸರ್ಕಾರ ರಾಜ್ಯದ ಅಭಿವೃದ್ಧಿಯನ್ನೇ ಮರೆತಿದೆ ಎಂದು ಕಿಡಿಕಾರಿದರು.

ಬಿಜೆಪಿ ಬರ ಅಧ್ಯಯನದ ಮೂಲಕ ಡ್ರಾಮಾ ಕಂಪನಿ ಶುರುಮಾಡಿದೆ ಎಂಬ ಸಚಿವ ಶಿವರಾಜ್ ತಂಗಡಗಿ ಆರೋಪದ ಕುರಿತಾಗಿ ತಿರುಗೇಟು ನೀಡಿದ ಶಾಸಕ ಸಿ.ಸಿ. ಪಾಟೀಲ, ನಾವು ನಾಟಕ ಮಾಡುತ್ತಿದ್ದೇವೆಂದಾದರೆ, ನಾಟಕಕ್ಕ ಪ್ರೇರಣೆ ನೀಡಿದವರಾರು? ಅವರು ಸರಿಯಾಗಿ ಅನುದಾನ ಒದಗಿಸಿದ್ದರೆ ನಾವ್ಯಾಕೆ ನಾಟಕ ಪ್ರಾರಂಭಿಸುತ್ತಿದ್ದೆವು? ನಾವು ವಿರೋಧ ಪಕ್ಷದಲ್ಲಿದ್ದೇವೆ. ಸರ್ಕಾರದ ಲೋಪ-ದೋಷಗಳನ್ನು ಎತ್ತಿ ಹಿಡಿಯಬೇಕಾಗಿದ್ದು ನಮ್ಮ ಧರ್ಮ. 136 ಸೀಟು ಬಂದಿರುವುದರಿಂದ ಭಸ್ಮಾಸುರನಿಗೆ ಶಕ್ತಿ ಬಂದಂತಾಗಿದೆ. ಆದರೆ ಅಭಿವೃದ್ಧಿ ಕಾರ್ಯಕ್ರಮ ಒಂದೂ ಇಲ್ಲವಾಗಿದೆ. ನಾವು ಜಾರಿಗೆ ತಂದಿದ್ದ ಅಭಿವೃದ್ಧಿ ಕಾರ್ಯಕ್ರಮಗಳನ್ನು ನಿಲ್ಲಿಸಿದ್ದಾರೆ. ಕೆಲಸ ಮಾಡಿದ ಗುತ್ತಿಗೆದಾರರ ಬಿಲ್ ಕೊಡಿಸುತ್ತಿಲ್ಲ. ಇದಕ್ಕಿಂತ ಕೆಳಮಟ್ಟದ ರಾಜಕಾರಣ ಬೇಕಾ ಎಂದು ಪ್ರಶ್ನಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶಾಸಕರಾದ ಡಾ.ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಮಾಜಿ ಶಾಸಕ ಕಳಕಪ್ಪ ಬಂಡಿ ಸೇರಿದಂತೆ ಅನೇಕರಿದ್ದರು.

> ಶನಿವಾರ ಬಿಜೆಪಿ ಬರ ಅಧ್ಯಯನ ತಂಡದೊಂದಿಗೆ ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡ ಮಾಜಿ ಸಚಿವ ಶ್ರೀರಾಮುಲು, ಗದಗ ಜಿಲ್ಲೆಯ ನಾಗಾವಿ ಹಾಗೂ ಶಿರಹಟ್ಟಿಯಲ್ಲಿ ಬರ ವೀಕ್ಷಣೆ ನಡೆಸಿದರು. ಈ ಸಂದರ್ಭದಲ್ಲಿ ಮುಖಂಡರೆದುರು ತಮ್ಮ ಅಳಲು ತೋಡಿಕೊಂಡ ರೈತರು, ರೈತರ ಸಾಲ ಮನ್ನಾ ಮಾಡದಿದ್ರೆ ಮನೆಗೊಂದು ಹೆಣ ಬೀಳುವ ಪರಿಸ್ಥಿತಿಯಿದೆ. ಸರ್ಕಾರದಿಂದ ಇದುವರೆಗೂ ಯಾವುದೇ ಪರಿಹಾರ ಸಿಕ್ಕಿಲ್ಲ. ಬಿಟ್ಟಿ ಭಾಗ್ಯಗಳಿಂದ ನಮಗೇನೂ ಅನುಕೂಲವಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.
>
> ಹೊಲದಲ್ಲಿ ಕೆಲಸ ಮಾಡಲು ಕೂಲಿ ಕಾರ್ಮಿಕರು ಸಿಗುತ್ತಿಲ್ಲ. ಮಹಿಳಾ ಕೂಲಿ ಕಾರ್ಮಿಕರನ್ನು ಕೃಷಿ ಕೆಲಸಕ್ಕೆ ಕರೆದರೆ ದೇವಸ್ಥಾನಕ್ಕೆ ಹೋಗುತ್ತೇವೆ ಅಂತಾರೆ. ಹೀಗಾಗಿ ಅನ್ನದಾತರು ಬಹಳ ಸಂಕಷ್ಟ ಅನುಭವಿಸುವ ಸ್ಥಿತಿ ನಿರ್ಮಾಣವಾಗಿದೆ. ನೀವಾದರೂ ಕೇಂದ್ರ ಸರ್ಕಾರದಿಂದ ಪರಿಹಾರ ಕೊಡಿಸಿ ಎಂದು ಒತ್ತಾಯಿಸಿದರು.

### ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅಧ್ಯಕ್ಷತೆಯಲ್ಲಿ ಮಲಪ್ರಭಾ ಯೋಜನಾ ನೀರಾವರಿ ಸಲಹಾ ಸಮಿತಿ ಸಭೆ

# ನ.7ರಿಂದ ಒಟ್ಟೂ 1 ಟಿಎಂಸಿ ನೀರು ಬಿಡುಗಡೆಗೆ ನಿರ್ಧಾರ



■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ರೈತರ ಹಿತದೃಷ್ಟಿಯಿಂದ ಮಲಪ್ರಭಾ ಜಲಾಶಯದಿಂದ ಮಲಪ್ರಭಾ ಬಲದಂಡೆ ಕಾಲುವೆ, ನರಗುಂದ ಶಾಖಾ ಕಾಲುವೆ ಹಾಗೂ ಶಿಂಗಾರಕೊಪ್ಪ ಏತ ನೀರಾವರಿ ಯೋಜನೆಯ ಕಾಲುವೆಗಳ ಮೂಲಕ ನವೆಂಬರ್ 7ರಿಂದ ಒಟ್ಟಾರೆ ಒಂದು ಟಿಎಂಸಿ ನೀರು ಬಿಡಗಡೆಗೆ ನಿರ್ಧರಿಸಲಾಗಿದೆ.

ಮಲಪ್ರಭಾ ಯೋಜನಾ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರು ಹಾಗೂ ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಶೇಷ ಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶನಿವಾರ ನಡೆದ ಮಲಪ್ರಭಾ ಯೋಜನೆಯ ನೀರಾವರಿ ಸಲಹಾ ಸಮಿತಿಯ 2ನೇ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಯಿತು.

ಪ್ರಸಕ್ತ ಜಲಾಶಯದಲ್ಲಿನ ನೀರಿನ ಲಭ್ಯತೆಗೆ ಅನುಗುಣವಾಗಿ, ಬರಗಾಲವನ್ನು ಗಮನಿಸಿ ರೈತರ ಒತ್ತಾಯದನ್ವಯ ನ.7ರಿಂದ ನೀರನ್ನು ಜನ-ಜಾನುವಾರುಗಳಿಗಾಗಿ, ಮೇವಿಗಾಗಿ ಹರಿಸಲು ನಿರ್ಣಯಿಸಲಾಗಿದೆ. ರೈತರು ಮಲಪ್ರಭಾ ಜಲಾಶಯದ ಈ ನೀರನ್ನು ಅವಲಂಬಿಸಿ ಮುಂದಿನ ಯಾವುದೇ ಬಿತ್ತನೆಯನ್ನು ಮಲಪ್ರಭಾ ಅಚ್ಚುಕಟ್ಟು ಪ್ರದೇಶದಲ್ಲಿ ಮಾಡದೇ ಇರಲು ಸೂಚಿಸಲಾಗಿದೆ.

ಸಲಹಾ ಸಮಿತಿಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಲಪ್ರಭಾ ಯೋಜನಾ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರು ಹಾಗೂ ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಶೇಷ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು, ಈ ವರ್ಷ ಮಳೆ ಕಡಿಮೆಯಾಗಿರುವುದರಿಂದ ನೀರಿನ ಕೊರತೆ ಎದುರಾಗಿದೆ. ಮುಂದಿನ ದಿನಗಳಲ್ಲಿ ಬೆಳೆಗಳಿಗೆ ಮಾತ್ರವಲ್ಲದೇ ಕುಡಿಯುವ ನೀರಿಗೂ ಸಮಸ್ಯೆಯಾಗುವ ಸಾಧ್ಯತೆಯಿದೆ. ಆದಾಗ್ಯೂ ರೈತರ ಹಿತದೃಷ್ಟಿಯಿಂದ ಒಂದು ಟಿಎಂಸಿ ನೀರು ಬಿಡುಗಡೆಗೆ ತೀರ್ಮಾನಿಸಲಾಗಿದೆ. ನೀರಾವರಿ ಹಿತಾಸಕ್ತಿ ಹಾಗೂ ಕುಡಿಯುವ ನೀರು ಒದಗಿಸುವುದು ಈ ಎರಡೂ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದರು.

ಸಭೆಯಲ್ಲಿ ಮಾತನಾಡಿದ ಸವದತ್ತಿ ಶಾಸಕ ವಿಶ್ವಾಸ್ ವೈದ್ಯ ಮಾತನಾಡಿ, ಪ್ರಸ್ತುತ ಬರಗಾಲ ಇರುವುದರಿಂದ ಮಲಪ್ರಭಾ ಜಲಾಶಯದಿಂದ ಹುಬ್ಬಳ್ಳಿ-ಧಾರವಾಡ ಸೇರಿದಂತೆ ಇತರೆ ಪಟ್ಟಣಗಳಿಗೆ ನಿರಂತರ ನೀರು ಬಿಡುವ ಬದಲಾಗಿ ನಾಲ್ಕೈದು ದಿನಗಳಿಗೊಮ್ಮೆ ನೀರು ಬಿಡುಗಡೆ ಮಾಡುವ ಕುರಿತು ನಿರ್ಧಾರ ಕೈಗೊಳ್ಳಬೇಕು ಎಂದು ಮನವಿ ಮಾಡಿಕೊಂಡರು.

ಬೆಳಗಾವಿ ಪ್ರಾದೇಶಿಕ ಆಯುಕ್ತರಾದ ಸಂಜಯ ಶೆಟ್ಟೆಣ್ಣವರ, ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಮುಖ್ಯ ಇಂಜಿನಿಯರ್ ಅಶೋಕ ವಾಸನದ, ಮಲಪ್ರಭಾ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಅಧೀಕ್ಷಕ ಇಂಜಿನಿಯರ್ ವಿ.ಎಸ್. ಮಧುಕರ್ ಮತ್ತಿತರರು ಉಪಸ್ಥಿತರಿದ್ದರು.

ಇದಕ್ಕೂ ಮುಂಚೆ ಸಚಿವರು ಹಾಗೂ ಶಾಸಕರ ಜತೆ ಚರ್ಚೆ ನಡೆಸಿದ ರೈತರು, ತಮ್ಮ ಸಂಕಷ್ಟವನ್ನು ಪರಿಗಣಿಸಿ ಜನ-ಜಾನುವಾರುಗಳ ಹಿತರಕ್ಷಣೆಗಾಗಿ ನೀರು ಬಿಡುಗಡೆ ಮಾಡಬೇಕು ಎಂದು ಒಕ್ಕೊರಲಿನಿಂದ ಒತ್ತಾಯಿಸಿದರು.

> ಜಲಾಶಯದಲ್ಲಿರುವ 15 ಟಿಎಂಸಿ ನೀರನ್ನು ಕುಡಿಯುವ ಉದ್ದೇಶ, ಕೃಷಿ ಬಳಕೆಯ ಆದ್ಯತೆ ಆಧರಿಸಿ ನೀರು ಬಿಡುಗಡೆಗೆ ಸಲಹಾ ಸಮಿತಿಯು ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ನವಲಗುಂದ ಶಾಸಕ ಎನ್.ಎಚ್ ಕೋನರೆಡ್ಡಿ ಸಲಹೆ ನೀಡಿದರು.
>
> ಬೈಲಹೊಂಗಲ ಶಾಸಕ ಮಹಾಂತೇಶ್ ಕೌಜಲಗಿ ಅವರು, ರೈತರ ಹಿತಾಸಕ್ತಿ ಹಾಗೂ ಮುಂಬರುವ ದಿನಗಳಲ್ಲಿ ಎದುರಾಗಬಹುದಾದ ಕುಡಿಯುವ ನೀರಿನ ಸಮಸ್ಯೆಯನ್ನು ಗಮನದಲ್ಲಿಟ್ಟುಕೊಂಡು ಸಮತೋಲನದ ನಿರ್ಧಾರ ಕೈಗೊಳ್ಳಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

### ಬಾಲ್ಯವಿವಾಹ ನಿಷೇಧ ಪ್ರತಿಜ್ಞಾವಿಧಿ ಕಾರ್ಯಕ್ರಮದಲ್ಲಿ ಆರ್.ಎಸ್. ಬುರಡಿ

# ಬಾಲ್ಯವಿವಾಹಕ್ಕೆ ಕಡಿವಾಣ ಹಾಕಿ



■ ವಿಜಯಸಾಕ್ಷಿ ಸುದ್ದಿ, ಗದಗ

ಎಲ್ಲ ಮಕ್ಕಳಿಗೂ ಸಂಪೂರ್ಣ ಆರೈಕೆ ಹಾಗೂ ಸುರಕ್ಷೆ ನೀಡುವುದರೊಂದಿಗೆ ಆ ಮಗುವನ್ನು ಪರಿಪೂರ್ಣ ಹಾಗೂ ಸಮಗ್ರ ವ್ಯಕ್ತಿತ್ವವುಳ್ಳವರಾಗಿ ಬೆಳೆಸುವದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಮಗುವಿನ ಜೀವನಕ್ಕೆ ತೊಡಕಾಗಬಲ್ಲ ಬಾಲ್ಯವಿವಾಹದಂತಹ ಕಾರ್ಯಕ್ಕೆ ಕಡಿವಾಣ ಹಾಕಬೇಕಾಗಿದೆ ಎಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಹೇಳಿದರು.

ಅವರು ಶನಿವಾರ ಗದುಗಿನ ಸಿದ್ಧರಾಮೇಶ್ವರ ನಗರದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ಜರುಗಿದ ಬಾಲ್ಯವಿವಾಹ ನಿಷೇಧ ಕುರಿತು ಪ್ರತಿಜ್ಞಾವಿಧಿ ಕಾರ್ಯಕ್ರಮವನ್ನು ಸಮುದಾಯದೊಂದಿಗೆ ನೆರವೇರಿಸಿ ಮಾತನಾಡಿದರು. ಬಾಲ್ಯ ವಿವಾಹವನ್ನು ಏರ್ಪಡಿಸುವ, ನಿರ್ದೇಶಿಸುವ, ನೆರವೇರಿಸುವ ಮತ್ತು ಈ ಕಾರ್ಯಕ್ಕೆ ಪ್ರೋತ್ಸಾಹ ನೀಡುವ ಯಾವುದೇ ವ್ಯಕ್ತಿ ಹಾಗೂ ಸಂಸ್ಥೆಯು ತೀವ್ರ ದಂಡನೆಗೆ ಒಳಪಡುತ್ತದೆ. ಬಾಲ್ಯವಿವಾಹವನ್ನು ತಡೆಗಟ್ಟುವದು ನಮ್ಮ ಪ್ರಥಮ ಗುರಿಯಾಗಬೇಕು ಎಂದರು.

ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಂಪನ್ಮೂಲ ವ್ಯಕ್ತಿಗಳಾದ ಕೆ.ಎಸ್. ಬೇಲೇರಿ, ಟಿ.ಎಸ್. ಹೂಗಾರ ಹಾಗೂ ಮುಖ್ಯೋಪಾಧ್ಯಾಯರಾದ ಎಂ.ಎಂ. ಜೋಗಿನ, ಅಶೋಕ ಲಮಾಣಿ, ಅಂಗನವಾಡಿ ಕಾರ್ಯಕರ್ತೆಯರಾದ ಸಾವಿತ್ರಿ ಮಠದ, ರಾಜೇಶ್ವರಿ ಬಿಸನಳ್ಳಿ, ರತ್ನವ್ವ ಕೊರದಾಳ, ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಸಂಜೀವಪ್ಪ ವಾಲೀಕಾರ, ಶಿಕ್ಷಕರಾದ ಎಂ.ಎ. ಕಂದಗಲ್ಲ, ಎಸ್.ಆರ್. ಕಲ್ಯಾಣಕರ, ಜಿ.ಎಂ. ದೇವಗಿರಿ, ಯಶವಂತ ಬೇವಿನಕಟ್ಟಿ, ಜ್ಯೋತಿ ಕಮದೋಡ, ಸಿದ್ಧಮ್ಮ ಗೌಡರ, ಶೋಭಾ ಕುಷ್ಟಗಿ, ಶರೀಫ್ ಮುಳಗುಂದ, ಶಾಹೀದ್ ಲೋಹಾರ, ಶೈನಾಜ್ ನದಾಫ್ ಬಾಲ್ಯವಿವಾಹ ಕುರಿತು ತಿಳುವಳಿಕೆ ನೀಡಿದರು.

ಹಿರಿಯರಾದ ನಾಗರಾಜ ಬದಾಮಿ, ಮಹಬೂಬ ಅಗಸಿಮನಿ, ಸುನೀತಾ ಶಿದ್ಲಿಂಗ್, ಶಾಂತಾ ನಿಡಗುಂದಿ, ಕಮಲಾ ಹೂಗಾರ, ಮುತ್ತರಾಜ ಬಸರಿಗಿಡದ, ರಾಮು ಶಿದ್ಲಿಂಗ್, ನಾಗರಾಜ ಚಿನ್ನಾಪೂರ, ಸುವರ್ಣಾ ಕಾಳಗಿ, ರೇಣುಕಾ ಹೂಗಾರ, ಗಿರಿಜಾ ಹಿರೇಮಠ, ಯಾಶಿನ್ ನವಲಗುಂದ, ಸಾವಿತ್ರಿ ಬಳ್ಳಾರಿ, ಶಾಂತಾ ಕಟಗಿ ಪಾಲ್ಗೊಂಡಿದ್ದರು.

### ಕನ್ನಡ ಸಂಭ್ರಮ-50

# ಭುವನೇಶ್ವರಿಗೆ ಪೂಜೆ ಸಲ್ಲಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ





■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರೈಸಿದರ ಹಿನ್ನಲೆಯಲ್ಲಿ ಶುಕ್ರವಾರದಂದು ಗದುಗಿನ ದಿ.ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕೆ.ಎಚ್.ಪಾಟೀಲ ವೇದಿಕೆ ಪಕ್ಕದಲ್ಲಿದ್ದಂತಹ ಐವತ್ತು ವರ್ಷಗಳ ಹಿಂದೆ ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಲು ನಿರ್ಣಯ ಕೈಗೊಂಡಂತಹ ಶಕ್ತಿ ಕೇಂದ್ರವಾದ ವೇದಿಕೆಯಲ್ಲಿನ ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ವೈದ್ಯಕೀಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಸೇರಿದಂತೆ ಸಚಿವ ಸಂಪುಟದ ಸಚಿವರುಗಳು ಉಪಸ್ಥಿತರಿದ್ದರು.

### ಕನ್ನಡ ಸಂಭ್ರಮ-50

# ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸನ್ಮಾನ





■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರೈಸಿದರ ಹಿನ್ನಲೆಯಲ್ಲಿ ಶುಕ್ರವಾರದಂದು ಗದುಗಿನ ದಿ.ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಕನ್ನಡ ಸಂಭ್ರಮ-50 ಆಯೋಜಿಸಲಾಗಿತ್ತು. ಭವ್ಯ ಸಮಾರಂಭವನ್ನು ಅಚ್ಚುಕಟ್ಟಾಗಿ ಆಯೋಜಿಸಲು ಶ್ರಮಿಸಿದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಬೆಳಗಾವಿ ಉತ್ತರ ವಲಯದ ಆರಕ್ಷಕ ಮಹಾ ನಿರೀಕ್ಷಕರಾದ ವಿಕಾಸಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಅವರುಗಳಿಗೆ ಸನ್ಮಾನಿಸಲಾಯಿತು.



## ವಿಶೇಷ ಚೇತನರ ಬಗ್ಗೆ ಕಾಳಜಿ ಇರಲಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿಶೇಷ ಚೇತನ ಮಕ್ಕಳಿಗೆ ಪ್ರೀತಿ ತೋರಿ, ಅವರನ್ನು ಮಾನಸಿಕ ಹಾಗೂ ದೈಹಿಕವಾಗಿ ಸದೃಢರನ್ನಾಗಿಸುವ ಗುರುತರ ಜವಾಬ್ದಾರಿ ಸಮುದಾಯದ ಮೇಲಿದೆ. ಮುಖ್ಯವಾಗಿ ವಿಶೇಷ ಚೇತನ ಮಕ್ಕಳು ಮುಖ್ಯವಾಹಿನಿಗೆ ಬರುವಲ್ಲಿ ನಾವೆಲ್ಲರೂ ಶ್ರಮಿಸಬೇಕೆಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಹೇಳಿದರು.

ಅವರು ಶನಿವಾರ ಗದುಗಿನ ಸಿದ್ಧರಾಮೇಶ್ವರ ನಗರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 6ರ ವಿಶೇಷ ಚೇತನ ವಿದ್ಯಾರ್ಥಿಯ ಮನೆಗೆ ಭೇಟಿ ನೀಡಿ, ಪಾಲಕರೊಂದಿಗೆ ಮಗುವಿನ ಆರೋಗ್ಯದ ಕುರಿತು ಚರ್ಚಿಸಿ, ಸರಕಾರದ ಸೌಲಭ್ಯದ ಚೆಕ್‌ನ್ನು ಮಗುವಿನ ಪಾಲಕರಿಗೆ ವಿತರಿಸಿ ಮಾತನಾಡಿದರು.

ಇಂತಹ ಮಕ್ಕಳ ಸೇವೆ ನಿಸ್ವಾರ್ಥ ಸೇವೆಯಾಗಿದೆ ಎಂದ ಅವರು, ಈ ಕಾರ್ಯದಲ್ಲಿ ತೊಡಗಿರುವ ತಂದೆ-ತಾಯಿ ಅವರನ್ನು, ಶಾಲೆಯ ಶಿಕ್ಷಕರನ್ನು ಹಾಗೂ ಸಂಪನ್ಮೂಲ ವ್ಯಕ್ತಿಯನ್ನು ಅಭಿನಂದಿಸಿದರು.

ಸಂಪನ್ಮೂಲ ವ್ಯಕ್ತಿಗಳಾದ ಕೆ.ಎಸ್. ಬೇಲೇರಿ, ಟಿ.ಎಸ್. ಹೂಗಾರ, ಶಿಕ್ಷಕರಾದ ಎಂ.ಎಂ. ಜೋಗಿನ, ಎಂ.ಕೆ. ಕಂದಗಲ್ಲ, ಎಸ್.ಆರ್. ಕಲ್ಯಾಣ್ಕರ್, ಜಿ.ಎಂ. ದೇವಗಿರಿ, ಅಶೋಕ ಲಮಾಣಿ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು.




ಬಹಿರಂಗವಾಗಿ ಸಿಎಂ ಗಾದಿ ಬದಲಾವಣೆ ಕುರಿತು ಚರ್ಚೆ ನಡೆಸುತ್ತಿರುವ ಶಾಸಕ ಮತ್ತು ಸಚಿವರಿಗೆ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಕ್ಲಾಸ್ ತೆಗೆದುಕೊಂಡಿದ್ದು, ಲೋಕಸಭಾ ಚುನಾವಣೆ ಮೇಲೆ ಗಮನ ಕೇಂದ್ರೀಕರಿಸುವಂತೆ ಸೂಚಿಸಿದ್ದಾರೆ.

### ವಾರದ ಸಾಹಿತ್ಯ ಚಿಂತನಾಗೋಷ್ಠಿಗಳಲ್ಲಿನ ವಿಶೇಷ ಉಪನ್ಯಾಸಗಳ ದಾಖಲೀಕರಣ

# ತಾಯಿ 'ಭುವನೇಶ್ವರಿಯ ತೇರ ಎಳೆದವರು'

ಪ್ರತಿ ವರ್ಷ ನವೆಂಬರ್ ತಿಂಗಳು ಬಂತೆಂದರೆ ಸಾಕು, ಎಲ್ಲೆಲ್ಲೂ ಕನ್ನಡದ್ದೇ ಸಡಗರ, ಸಂಭ್ರಮ. ಕನ್ನಡ ನಾಡು-ನುಡಿ, ನೆಲ-ಜಲ, ಭಾಷೆ ಸಂಸ್ಕೃತಿ, ಆಚಾರ ವಿಚಾರಗಳಿಂದ ವಿವಿಧತೆಯಲ್ಲಿ ಏಕತೆಯನ್ನು ಒಳಗೊಂಡಿದ್ದು, ಹರಿದು ಹಂಚಿ ಹೋಗಿದ್ದ ಕನ್ನಡಿಗರ ಭೌಗೋಳಿಕ ಪ್ರದೇಶವನ್ನು ಭಾಷೆಯ ಆಧಾರದ ಮೇಲೆ ಒಂದುಗೂಡಿಸಿದ ಕೀರ್ತಿ ಅನೇಕ ಮಹನೀಯರಿಗೆ ಸಲ್ಲುತ್ತದೆ. ಆ ನಿಟ್ಟಿನಲ್ಲಿ ಕನ್ನಡ ಭಾಷಾ ಸಾಹಿತ್ಯವನ್ನು ಸಮೃದ್ಧಗೊಳಿಸುವಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ವಿಶಿಷ್ಟ ಹಾಗೂ ವಿನೂತನ ಕಾರ್ಯ ಚಟುವಟಿಕೆಗಳ ಮೂಲಕ ಅವಿರತ ಶ್ರಮಿಸುತ್ತಿದೆ.

ಸಾಹಿತ್ಯದ ಸೇವೆಗೆ ತನು-ಮನ-ಧನವನ್ನು ಅರ್ಪಿಸುವ ಮೂಲಕ ಕನ್ನಡಮ್ಮನ ಅಳಿಲು ಸೇವೆ ಮಾಡಲು ಸಿಕ್ಕ ಸೌಭಾಗ್ಯವೆಂದು ಭಾವಿಸಿ, ಸ್ವಂತಕ್ಕೆ ಸ್ವಲ್ಪ ಸಮಾಜಕ್ಕೆ ಸರ್ವಸ್ವ ಎನ್ನುವ ಕಾಯಕಲ್ಪದ ಅಡಿಯಲ್ಲಿ 450ಕ್ಕೂ ಹೆಚ್ಚು ಕಾರ್ಯಕ್ರಮಗಳನ್ನು ಆಯೋಜಿಸಿ ಯಶಸ್ವಿಗೊಳಿಸಿದ ಕೀರ್ತಿಗೆ ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಕಸಾಪ ಅಧ್ಯಕ್ಷರಾಗಿದ್ದ ಈಶ್ವರಪ್ಪ ರೇವಡಿಯವರಿಗೆ ಸಲ್ಲುತ್ತದೆ.




ಕಸಾಪ ತಾಲೂಕು ಘಟಕ ರೋಣ ಹಾಗೂ ಗಜೇಂದ್ರಗಡ ವತಿಯಿಂದ ಅನೇಕ ಕಡೆಗಳಲ್ಲಿ ಪ್ರತೀ ವಾರ ಸಾಹಿತ್ಯ ಚಿಂತನಾಗೋಷ್ಠಿ, ವಿಚಾರ ಸಂಕಿರಣ, ಕವಿಗೋಷ್ಠಿ, ಮನೆ ಮನೆ ಸಾಹಿತ್ಯ ಕಲರವ, ಶಾಲೆ ಕಾಲೇಜುಗಳ ವಿದ್ಯಾರ್ಥಿಗಳಿಗಾಗಿ ವಿಶೇಷ ಉಪನ್ಯಾಸ ಮಾಲಿಕೆಗಳು ಇತ್ಯಾದಿ ಕಾರ್ಯಕ್ರಮಗಳನ್ನು ನಡೆಸಿರುವುದು ಪ್ರಶಂಸನಾರ್ಹ. ರೇವಡಿಯವರು ಸಾಹಿತ್ಯ ಚಟುವಟಿಕೆಗಳನ್ನು ಕೇವಲ ಕಾಟಾಚಾರಕ್ಕೆ ನಡೆಸದೆ ದಾಖಲೆಯಾಗಿ ಉಳಿಯುವಂತೆ ವಿಶೇಷ ಪ್ರಯತ್ನ ಮಾಡಿದ್ದಾರೆ.

'ತಾಯಿ ಭುವನೇಶ್ವರಿಯ ತೇರ ಎಳೆದವರು' ಈ ಕೃತಿ ರತ್ನ ಸಂಪುಟ 1ರ ಪ್ರಧಾನ ಸಂಪಾದಕರಾಗಿ ಈಶ್ವರಪ್ಪ ರೇವಡಿಯವರು ಹಾಗೂ ಸಂಪಾದಕರಾಗಿ ಎಂ.ಎಸ್. ಮಕಾನದಾರ, ಪ್ರೊ. ಬಸವರಾಜ ಮುನವಳ್ಳಿ ಅವರು ಮುತುವರ್ಜಿ ವಹಿಸಿ, 2016ರಿಂದ 2021ರ ಅವಧಿಯಲ್ಲಿ ರೋಣ ಹಾಗೂ ಗಜೇಂದ್ರಗಡ ಕಸಾಪ ವತಿಯಿಂದ ಜರುಗಿದ ವಾರದ ಸಾಹಿತ್ಯ ಚಿಂತನಾಗೋಷ್ಠಿಗಳಲ್ಲಿನ ವಿಶೇಷ ಉಪನ್ಯಾಸಗಳನ್ನು ದಾಖಲೀಕರಣ ಮಾಡುವುದರಲ್ಲಿ ಸಾಕಷ್ಟು ಶ್ರಮಿಸಿದ್ದಾರೆ. ಸಂಪುಟ ಒಂದರಲ್ಲಿ ಒಟ್ಟು 41 ಉಪನ್ಯಾಸ ಮಾಲಿಕೆಗಳನ್ನು ಒಟ್ಟುಗೂಡಿಸಿ, ದಾಖಲಿಸಿರುವುದು ಸಾಹಿತ್ಯ ವಲಯದಲ್ಲಿ ಅಗ್ರ ದಾಖಲೆ ಎಂದರೆ ತಪ್ಪಾಗಲಾರದು.

ಇದು ಕೇವಲ ಉಪನ್ಯಾಸಕರ ವಿಚಾರ ಅಭಿವ್ಯಕ್ತಿಯಾಗಿರದೆ, ಅನೇಕ ಸಾಹಿತ್ಯಾಸಕ್ತ ಉಪನ್ಯಾಸಕರಿಗೆ ಸಾಹಿತ್ಯದ ಸಂಪನ್ಮೂಲವಾಗಿ, ಆಕರ ಗ್ರಂಥವಾಗಿ ನಿಲ್ಲಬಹುದು. ಉಪನ್ಯಾಸಕರಿಗೆ ನೀಡಿದ ವಿಷಯ ಹಾಗೂ ಉಪನ್ಯಾಸಕರು ಮಂಡಿಸಿರುವ ವಿಚಾರ ಲಹರಿಗಳು, ಅನುಭವದ ನುಡಿಮುತ್ತುಗಳು, ಸಾಧಕರ ಸಾಧನೆಯ ಮೆಟ್ಟಿಲುಗಳು ಓದುಗರನ್ನು ಮಂತ್ರ ಮುಗ್ಧರನ್ನಾಗಿಸುತ್ತವೆ. ಕಸಾಪದ ಅಧ್ಯಕ್ಷರಾದಿಯಾಗಿ ಪದಾಧಿಕಾರಿಗಳು ಸೇರಿ ಆಯಾ ಸಂದರ್ಭ, ಸನ್ನಿವೇಶ, ಕಾಲಘಟ್ಟ, ಮಹನೀಯರ ಜನ್ಮದಿನ, ವಿಶೇಷತೆಗಳನ್ನು ಅನುಸರಿಸಿ ವಿಷಯವನ್ನು ಆಯ್ಕೆ ಮಾಡಿ ನೀಡಿರುವುದು ಸ್ತುತ್ಯಾರ್ಹವಾಗಿದೆ.

ಕರ್ನಾಟಕ ಏಕೀಕರಣ ಹೋರಾಟಗಾರರ ಶ್ರಮ ಸಾರ್ಥಕವಾಗಿರುವುದು ಅವರು ಹಾಕಿಕೊಟ್ಟ ಭದ್ರ ಬುನಾದಿಯ ಮೇಲೆ ಕನ್ನಡದ ತೇರನ್ನು ಗಣನೀಯವಾಗಿ ಮುಂದುವರಿಸುತ್ತಿರುವುದು. ಕನ್ನಡ ಸಾಹಿತ್ಯದ ವಿವಿಧ ಮಜಲುಗಳು ಆಲದ ಮರದ ಬಿಳಿಲುಗಳಂತೆ ಎಲ್ಲೆಡೆಗೂ ಚಾಚಿಕೊಂಡಿವೆ. ಆದ್ದರಿಂದ ಇದೊಂದು ವಿಶಿಷ್ಟ ಕೃತಿಯಾಗಿದೆ. ಈ ಪುಸ್ತಕದ ಇನ್ನೊಂದು ವಿಶೇಷವೆಂದರೆ, ಸುದೀರ್ಘವಾಗಿ ನಡೆದು ಬಂದ ಎಲ್ಲಾ ಕಾರ್ಯಕ್ರಮಗಳ ಪಕ್ಷಿ ನೋಟಗಳಂತೆ ಕಲರ್‌ಫುಲ್ ಛಾಯಾಚಿತ್ರಗಳ ಸಂಗ್ರಹ, ಪ್ರತೀ ಸಾಹಿತ್ಯದ ಕಾರ್ಯಕ್ರಮವು ನಡೆದು ಬಂದ ಸಂಕ್ಷಿಪ್ತ ವಿವರ, ಸಂಪನ್ಮೂಲ ವಿಷಯ ಮತ್ತು ವ್ಯಕ್ತಿಗಳು, ಕಾರ್ಯಕ್ರಮ ಜರುಗಿದ ಸ್ಥಳ, ದಿನಾಂಕ, ಉಪಸ್ಥಿತರಿರುವ ಗಣ್ಯರ ವಿವರ ಹಾಗೂ ಬಸವ ಪ್ರಕಾಶನದ ವತಿಯಿಂದ ಪ್ರಕಟಿಸಿದ ಕೃತಿಗಳ ಕುರಿತು ಅಮೂಲ್ಯವಾದ ಮಾಹಿತಿ ಓದುಗರನ್ನು ಆಕರ್ಷಿಸದೆ ಇರಲಾರವು. ಮತ್ತೊಂದು ವಿಶೇಷವೆಂದರೆ ಈ ಪುಸ್ತಕದಲ್ಲಿ ನನ್ನದೂ ಒಂದು ಉಪನ್ಯಾಸ (ಅಕ್ಷರದ ಬೆಳಕು ನೀಡಿದ ಶಿಕ್ಷಕಿ-ಸಾವಿತ್ರಿಬಾಯಿ ಫುಲೆ) ದ ಸಂಪನ್ಮೂಲ ಇರುವುದು ಹೆಮ್ಮೆಯ ಸಂಗತಿಯಾಗಿದೆ.

ಸಾಹಿತ್ಯದ ಕಾರ್ಯಕ್ರಮಗಳು ಕೇವಲ ಕಾರ್ಯಕ್ರಮಗಳಾಗಿರದೆ ಮುಂದಿನ ಪೀಳಿಗೆಗೆ ಸಾಹಿತ್ಯದ ರಸದೌತಣವನ್ನು ಉಣಬಡಿಸುವ ರಸಪಾಕದಂತಿದೆ. ಇಂತಹ ಅಪರೂಪದ ಕಾರ್ಯ ನಿರ್ವಹಿಸಿದ ಹಾಗೂ ಸಂಪನ್ಮೂಲವನ್ನು ಉಳಿಸಿ ಬೆಳೆಸುವ ಕಸಾಪ ದ ಕಾರ್ಯ ಚಟುವಟಿಕೆಗಳಿಗೆ ನನ್ನದೊಂದು ಸಲಾಂ.



– ಈಶ್ವರ ಕುರಿ(ಜಕ್ಕಲಿ).

### ಪತ್ರಿಕಾಗೋಷ್ಠಿಯಲ್ಲಿ ಸಚಿವ ಕೆ.ಎಚ್. ಮುನಿಯಪ್ಪ ಮಾಹಿತಿ

## ಹೊಸ ಪಡಿತರ ಕಾರ್ಡ್‌ಗೆ 2.90 ಲಕ್ಷ ಅರ್ಜಿ ಸಲ್ಲಿಕೆ



ತೆಲಂಗಾಣ, ಆಂಧ್ರಪ್ರದೇಶ ಹಾಗೂ ಛತ್ತೀಸಗಡ ರಾಜ್ಯಗಳಿಂದ ಅಕ್ಕಿಯನ್ನು ಖರೀದಿಸುವ ಪ್ರಕ್ರಿಯೆ ನಡೆಯುತ್ತಿದೆ. ಸಮರ್ಪಕ ಅಕ್ಕಿ ದೊರೆತ ನಂತರ ಹಣ ಸಂದಾಯದ ಬದಲಾಗಿ ಮೊದಲಿನಂತೆ ಅಕ್ಕಿಯನ್ನು ವಿತರಿಸಲಾಗುವುದು. ಗ್ಯಾರಂಟಿ ಯೋಜನೆಗಳಿಗೆ 50 ಸಾವಿರ ಕೋಟಿ ರೂ ಹಣವನ್ನು ಮೀಸಲಿಡಲಾಗಿದೆ. ಮುಂದಿನ ದಿನಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಹೆಚ್ಚಿನ ಅನುದಾನ ಬಿಡುಗಡೆಗೊಳಿಸಲಾಗುತ್ತದೆ. ಸರ್ಕಾರ ಸಮರ್ಥವಾಗಿ ಬರ ಪರಿಸ್ಥಿತಿಯನ್ನು ನಿರ್ವಹಿಸಲಿದೆ ಎಂದು ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ನಮ್ಮ ಸರ್ಕಾರ ನುಡಿದಂತೆ ನಡೆಯುತ್ತಿದೆ. ಚುನಾವಣಾ ಪೂರ್ವದಲ್ಲಿ ಘೋಷಿಸಿದ 5 ಗ್ಯಾರಂಟಿ ಯೋಜನೆಗಳಲ್ಲಿ ಅನ್ನಭಾಗ್ಯ, ಶಕ್ತಿ ಯೋಜನೆ, ಗೃಹ ಲಕ್ಷ್ಮೀ ಹಾಗೂ ಗೃಹ ಜ್ಯೋತಿ ಯೋಜನೆಗಳನ್ನು ಈಗಾಗಲೇ ಸಮರ್ಥವಾಗಿ ಜಾರಿಗೊಳಿಸಲಾಗಿದೆ. ಯುವ ನಿಧಿ ಯೋಜನೆಯನ್ನು ಮುಂದಿನ ದಿನಗಳಲ್ಲಿ ಜಾರಿಗೆ ತರಲಾಗುವುದು. ಈಗಾಗಲೇ ಹೊಸ ಪಡಿತರ ಕಾರ್ಡ್‌ಗಾಗಿ 2 ಲಕ್ಷ 90 ಸಾವಿರ ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರಾದ ಕೆ.ಎಚ್. ಮುನಿಯಪ್ಪ ಹೇಳಿದರು.

ಶುಕ್ರವಾರ ಹುಬ್ಬಳ್ಳಿಯ ಸರ್ಕ್ಯೂಟ್ ಹೌಸ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಲ್ಲಿಕೆಯಾಗಿರುವ ಅರ್ಜಿಗಳನ್ನು ಪರಿಷ್ಕರಣೆ ಮಾಡಿ ಅರ್ಹರಿಗೆ ಹೊಸ ಪಡಿತರ ಕಾರ್ಡ್ ವಿತರಿಸಲಾಗುವುದು. ಅನರ್ಹರೂ ಸಹ ಪಡಿತರ ಕಾರ್ಡ್ ಹೊಂದಿರುವುದು ಕಂಡು ಬಂದಿದ್ದು, ಆದಷ್ಟು ಶೀಘ್ರವಾಗಿ ಅನರ್ಹರನ್ನು ಗುರುತಿಸಿ ಕಾರ್ಡ್‌ಗಳನ್ನು ರದ್ದು ಪಡಿಸಲಾಗುತ್ತದೆ. ಪಡಿತರ ಅಕ್ಕಿಯನ್ನು ಮಾರಾಟ ಮಾಡುತ್ತಿರುವುದರ ಬಗ್ಗೆ ಹಲವು ದೂರುಗಳು ಬಂದಿವೆ. ಈ ಕುರಿತು ಇಲಾಖೆಯ ಅಧಿಕಾರಿಗಳು ಕ್ರಮ ಕೈಗೊಳ್ಳಲಿದ್ದಾರೆ. ಪಡಿತರ ಕಾರ್ಡ್ ಹೊಂದಿದ್ದರೂ ಸಹ ಸರ್ಕಾರದ ಬೇರೆ ಬೇರೆ ಯೋಜನೆಗಳನ್ನು ಪಡೆಯಲು ಅನುಕೂಲವಾಗುವ ನಿಟ್ಟಿನಲ್ಲಿ ಕೆಲವರ ಪಡಿತರ ಕಾರ್ಡ್‌ಗಳನ್ನು ರದ್ದು ಪಡಿಸುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಪತ್ರಿಕಾಗೋಷ್ಠಿಯಲ್ಲಿ ಶಾಸಕರಾದ ಎನ್.ಎಚ್. ಕೋನರೆಡ್ಡಿ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರಾದ ವಿನೋದಕುಮಾರ ಹೆಗ್ಗಳಗಿ, ಸೇರಿದಂತೆ ಇತರರು ಹಾಜರಿದ್ದರು.

## ಕನ್ನಡ ಬಳಸಿ, ಪಸರಿಸಿ: ಈಶ್ವರ ಬೆಟಗೇರಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕನ್ನಡ ಭಾಷೆ ಅತ್ಯಂತ ಶ್ರೀಮಂತ ಭಾಷೆ. ಇದಕ್ಕೆ ಸಹಸ್ರಾರು ವರ್ಷಗಳ ಇತಿಹಾಸವಿದೆ. ಈ ಭಾಷೆಯನ್ನು ಬಳಸಿ, ಪಸರಿಸಿ ಅನ್ಯ ಭಾಷಿಕರಿಗೆ ಕನ್ನಡವನ್ನು ಕಲಿಸುವ ಸಂಕಲ್ಪವನ್ನು ಈ ರಾಜ್ಯೋತ್ಸವದ ದಿನದಂದು ನಾವೆಲ್ಲರೂ ಮಾಡೋಣ ಎಂದು ನರೇಗಲ್ಲ ಹೋಬಳಿ ಕಾನಿಪ ಸಂಘದ ಅಧ್ಯಕ್ಷ ಈಶ್ವರ ಬೆಟಗೇರಿ ಹೇಳಿದರು.

ನರೇಗಲ್ಲನ ಜಗದ್ಗುರು ಪಂಚಾಚಾರ್ಯ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆಯ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕನ್ನಡದ ನೆಲ-ಜಲಕ್ಕಾಗಿ ಹಲವಾರು ಮಹನೀಯರು ಹೋರಾಡಿದ್ದಾರೆ. ಮೈಸೂರು ಪ್ರಾಂತವಾಗಿದ್ದ ಈ ನಾಡು ಕರ್ನಾಟಕ ರಾಜ್ಯವೆಂದು ಹೆಸರು ಪಡೆದು ದೇಶದ ಅಭಿವೃದ್ಧಿಯಲ್ಲಿ ತನ್ನದೇ ಆದ ಕಾಣಿಕೆಯನ್ನು ನೀಡುತ್ತಿದೆ. ಇಂತಹ ಮಹತ್ವದ ವಿಷಯವನ್ನು ನೀವು ತಿಳಿದುಕೊಂಡು ಇತರರಿಗೂ ತಿಳಿಸಲು ಮುಂದಾಗಿರಿ ಎಂದು ಹೇಳಿದರು.

ವಿದ್ಯಾರ್ಥಿಗಳಿಂದ ನಡೆದ ಹಾಡು-ಭಾಷಣ, ಹಚ್ಚೇವು ಕನ್ನಡದ ದೀಪ ನೃತ್ಯಗಳು ಪ್ರೇಕ್ಷಕರ ಮನಸೂರೆಗೊಂಡವು. ಮುಖ್ಯೋಪಾಧ್ಯಾಯೆ ಎನ್.ಎಸ್. ಹಿರೇಮಠ, ಈಶ್ವರ ಆದಿ, ಹುಚ್ಚೀರಪ್ಪ ಈಟಿ, ಬಸವರಾಜ ತಳಿಗೇರಿ ಹಾಗೂ ಶಾಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಶಿಕ್ಷಕಿ ಎ.ಎಮ್. ಬೆಟಗೇರಿ, ಸ್ವಾಗತಿಸಿದರು. ರತ್ನಾ ಕುರ್ತಕೋಟಿ ನಿರೂಪಿಸಿದರು. ವಿ.ಬಿ. ಬಿಂಗಿ ವಂದಿಸಿದರು.

## ಬಿವಿವಿ ಶಾಲೆಯಲ್ಲಿ ಕರ್ನಾಟಕ ರಾಜ್ಯೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲವಿನಾಯಕ ಶಾಲೆಯಲ್ಲಿ 68ನೇ ಕರ್ನಾಟಕದ ರಾಜ್ಯೋತ್ಸವವನ್ನು ಭುವನೇಶ್ವರಿ ದೇವಿ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ನಾಡಗೀತೆಯನ್ನು ಹಾಡುವುದರ ಮೂಲಕ ಆಚರಿಸಲಾಯಿತು.

ಸಹ ಶಿಕ್ಷಕಿ ಅನ್ನಪೂರ್ಣ ಬಮ್ಮನಗೌಡ್ರ ಕನ್ನಡ ರಾಜ್ಯೋತ್ಸವದ ಬಗ್ಗೆ ಪ್ರಸ್ತಾವಿಕವಾಗಿ ಮಾತನಾಡಿ, ಕನ್ನಡ ಭಾಷೆಯನ್ನು ಲಿಪಿಗಳ ರಾಣಿ ಎಂದು ಕರೆಯುವರು. ಸ್ವಾತಂತ್ರ ಪೂರ್ವದಲ್ಲಿ ಮತ್ತು ಸ್ವಾತಂತ್ರ್ಯದ ನಂತರದಲ್ಲಿ ಕನ್ನಡಿಗರ ನೆಲೆಗಳೆಲ್ಲವೂ ಹರಿದು ಹಂಚಿಹೋಗಿದ್ದವು. ಮದ್ರಾಸ್ ಕರ್ನಾಟಕ, ಮುಂಬೈ ಕರ್ನಾಟಕ, ಹೈದ್ರಾಬಾದ್ ಕನಾಟಕ, ಕೇರಳ ಕರ್ನಾಟಕ, ಮೈಸೂರು ಕರ್ನಾಟಕ ಎಂಬ ಸೀಮಿತ ಪ್ರಾಂತ್ಯವನ್ನು ಒಳಗೊಂಡಿತ್ತು. ಕರ್ನಾಟಕ ಏಕೀಕರಣ ಚಳುವಳಿಗೆ ರಾ.ಹ. ದೇಶಪಾಂಡೆ, ಆಲೂರು ವೆಂಕಟರಾಯ, ಸರ್ ಸಿದ್ದಪ್ಪ ಕಂಬಳಿ, ಕೆಂಗಲ್ ಹನುಮಂತಯ್ಯ ಮುಂತಾದ ಅನೇಕ ಮಹಾನ್ ವ್ಯಕ್ತಿಗಳು ಈ ಚಳುವಳಿಯಲ್ಲಿ ಭಾಗವಹಿಸಿದ್ದರು ಎಂದರು.

ಕಾರ್ಯಕ್ರಮದಲ್ಲಿ ಶಾಲೆಯ ನಿರ್ದೇಶಕ ವಿನಾಯಕ ಆರ್., ಪ್ರಾಚಾರ್ಯ ವಿ.ಎಮ್. ಅಡ್ನೂರ್, ಉಪ ಪ್ರಾಚಾರ್ಯ ಪಿ.ಜಿ. ಬ್ಯಾಳಿ, ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳು, ವಿದ್ಯಾಥಿಗಳು ಉಪಸ್ಥಿತರಿದ್ದರು. ವಿಶಾಲಾಕ್ಷಿ ಬಡಿಗೇರ ಕಾರ್ಯಕ್ರಮ ನಿರೂಪಿಸಿದರು.

## ಸ್ವಾಭಿಮಾನಿ ಕರವೇ ಬೆಟಗೇರಿ ಘಟಕದ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಉತ್ತರ ಕರ್ನಾಟಕ ಅಧ್ಯಕ್ಷ ಹಾಗೂ ಗದಗ ಜಿಲ್ಲಾಧ್ಯಕ್ಷ ಎಂ.ಎ. ಕುರ್ತಕೋಟಿಯವರ ನೇತೃತ್ವದಲ್ಲಿ ಬೆಟಗೇರಿ ನಗರ ಘಟಕಾಧ್ಯಕ್ಷ ಪ್ರಕಾಶ್ ರಾಮಣ್ಣ ಗಾರವಾಡ, ನಗರ ಘಟಕ ಉಪಾಧ್ಯಕ್ಷ ವೀರೇಶ್ ಬಸವರಾಜ್ ಗೋಡಿ, ನಗರ ಘಟಕ ಪ್ರಧಾನ ಕಾರ್ಯದರ್ಶಿ ಪ್ರಮೋದ್ ವೆಂಕಟೇಶ್ ಕುಲಕರ್ಣಿರವರನ್ನು ನೇಮಕ ಮಾಡಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸಂಚಾಲಕ ಬಶೀರ್ ಮುಳುಗುಂದ, ರೋಣ ತಾಲೂಕಾಧ್ಯಕ್ಷ ಎಂ.ಎಚ್. ನದಾಫ, ಇಮಾಮಸಾಬ ನಮಾಜಿ, ಪ್ರವೀಣ್ ತೋರಗಲ್ಲ ಮುಂತಾದವರು ಉಪಸ್ಥಿತರಿದ್ದರು.

## ಜೀವ ಬೆದರಿಕೆ: ಆರೋಪಿ ಗಡಿಪಾರಿಗೆ ಒತ್ತಾಯಿಸಿ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ದಲಿತ ಸಮುದಾಯದವರಿಗೆ ಜೀವ ಬೆದರಿಕೆ ಹಾಕಿರುವ ಸೊರಟೂರ ಗ್ರಾಮದ ವಿಠ್ಠಲ ಮಲ್ಲಾರಿಗೆ ಜಾಮೀನು ರಹಿತ ಪ್ರಕರಣ ದಾಖಲಿಸುವುದಲ್ಲದೇ, ಜಿಲ್ಲೆಯಿಂದ ಗಡಿಪಾರು ಮಾಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನಿರ್ದೇಶಿಸುವಂತೆ ಡಿಎಸ್‌ಎಸ್ ಮುಖಂಡ ಮರಿಯಪ್ಪ ಬ. ಪೂಜಾರ ಅವರ ನೇತೃತ್ವದಲ್ಲಿ ವಿವಿಧ ದಲಿತಪರ ಸಂಘಟನೆಗಳ ಮುಖಂಡರು ಶುಕ್ರವಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಗದಗನ ಅಂಬೇಡ್ಕರ್ ಭವನದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಈ ವೇಳೆ ಮಾತನಾಡಿದ ದಲಿತ ಮುಖಂಡ ಚಂದ್ರಶೇಖರ್ ಹರಿಜನ, ಮೊನ್ನೆಯಷ್ಟೇ ಸೊರಟೂರ ಗ್ರಾಮದಲ್ಲಿ ಕ್ಷುಲ್ಲಕ ಕಾರಣವನ್ನಿಟ್ಟುಕೊಂಡು ಧಾರ್ಮಿಕ ಕಾರ್ಯಕ್ರಮದ ವೇಳೆ ನಮ್ಮ ಸಮುದಾಯದ ವ್ಯಕ್ತಿಗೆ ಚಾಕುವಿನಿಂದ ಕೊಲೆಗೆ ಯತ್ನಿಸಿದ ಆರೋಪಿಯನ್ನು ಪೊಲೀಸ್ ಇಲಾಖೆ ಬಂಧಿಸಿರುವುದು ಸ್ವಾಗತಾರ್ಹ. ಇದೇ ಸಂದರ್ಭದಲ್ಲಿ ಆರೋಪಿ ದಲಿತ ಸಮುದಾಯದ ಜನರಿಗೆ ಜೀವ ಬೆದರಿಕೆ ಹಾಕಿದ್ದು, ಈತನ ಮೇಲೆ ಜಾಮೀನು ರಹಿತ ಪ್ರಕರಣ ದಾಖಲಿಸಬೇಕು ಎಂದು ಆಗ್ರಹಿಸಿದರು. ಸೊರಟೂರ ಗ್ರಾಮದಲ್ಲಿ 2012ರಲ್ಲೂ ಆರೋಪಿ ಮಲ್ಲಾರಿಯ ಕುಟುಂಬಸ್ಥರು ದಲಿತ ಸಮುದಾಯದವರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದರು. ಆಗ ಹಿರಿಯರ ಸಮ್ಮುಖದಲ್ಲಿ ರಾಜೀ ಪಂಚಾಯ್ತಿ ನಡೆಸಿ ಗ್ರಾಮದಲ್ಲಿ ಸೌಹಾರ್ದತೆಯಿಂದ ಬದುಕುತ್ತಿದ್ದರು. ಈಗ ಅದೇ ಕುಟುಂಬದ ವಿಠ್ಠಲ ಮಲ್ಲಾರಿ ಎಂಬ ಆರೋಪಿ ದಲಿತ ಸಮುದಾಯದ ವ್ಯಕ್ತಿಯ ಕೊಲೆಗೆ ಯತ್ನಿಸಿ ಗ್ರಾಮದ ಸೌಹಾರ್ದತೆಗೆ ಧಕ್ಕೆಯುಂಟು ಮಾಡಿದ್ದಾನೆ . ಹೀಗಾಗಿ ಆರೋಪಿಯನ್ನು ಗಡಿಪಾರು ಮಾಡಿ ಗ್ರಾಮದಲ್ಲಿ ಶಾಂತಿ ಸುವ್ಯವಸ್ಥಿತೆ ನೆಲೆಸುವು ಕೆಲಸವಾಗಬೇಕೆಂದರು.

ಈ ವೇಳೆ ಜಿಲ್ಲಾ ದಲಿತ ಮುಖಂಡರಾದ ನಿಂಗಪ್ಪ ದೊಡ್ಡಮನಿ, ರಮೇಶ ಪೋತರಾಜ, ಮುತ್ತುರಾಜ ಭಾವಿಮನಿ,ನಾಗೇಶ ಹರಿಜನ, ರವಿ ತಳವಾರ ದೇವರಾಜ ಕಟ್ಟಿಮನಿ, ಬಸವರಾಜ ಪೂಜಾರ, ಲಕ್ಷ್ಮಣ ಪೂಜಾರ, ಅಪ್ಪು ಪೂಜಾರ,ಮಾಂತೇಶ ಮ್ಯಾಗೇರಿ, ಶೇಖರ ಕಡೇಮನಿ, ಮಂಜು ಸಣ್ಣತಂಗಿಯವರ, ಜಗದೀಶ ಸಣ್ಣತಂಗಿಯವರ, ಸಿದ್ದು ಮ್ಯಾಗೇರಿ ಜಗದೀಶ ಹರಿಜನ, ದುರಗಪ್ಪ ಕಟ್ಟಿಮನಿ, ಹಾಗೂ ಸಮಾಜದ ಮಹಿಳೆಯರು ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

### 'ಏಕೀಕರಣ ಯೋಧರ ಯಶೋಗಾಥೆ' ಉಪನ್ಯಾಸ ಮಾಲಿಕೆಯಲ್ಲಿ ಶಾಂತಲಿಂಗ ಸ್ವಾಮೀಜಿ ಅಭಿಮತ

## ಕರ್ನಾಟಕ ಏಕೀಕರಣಕ್ಕೆ ದೊಡ್ಡಮೇಟಿ ಕೊಡುಗೆ ಅಪಾರ



ಸಾಹಿತಿ ಎಂ.ಎಸ್. ಧಡೇಸೂರಮಠ ಮಾತನಾಡಿ, ಸ್ವಾತಂತ್ರ್ಯ ಹೋರಾಟದ ಜೊತೆ ಜೊತೆಗೆ ಕರ್ನಾಟಕ ಏಕೀಕರಣಕ್ಕೆ ದುಡಿದವರು ಅಂದಾನಪ್ಪ ದೊಡ್ಡಮೇಟಿಯವರು. ಕರ್ನಾಟಕ ಏಕೀಕರಣಕ್ಕಾಗಿ ತನು, ಮನ ಧನವನ್ನು ಕಳೆದುಕೊಂಡರು. ಜಕ್ಕಲಿಯಂತಹ ಚಿಕ್ಕ ಗ್ರಾಮಕ್ಕೆ ಗಾಂಧೀಜಿ, ನೆಹರೂ ಅವರನ್ನು ಕರೆಸಿದ್ದು ಈಗ ಇತಿಹಾಸ ಎಂದರು.

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹರಿದು ಹಂಚಿಹೋಗಿದ್ದ ಕರುನಾಡಿನ ಏಕೀರಣಕ್ಕಾಗಿ ಅಸಂಖ್ಯಾತ ಜನರ ತ್ಯಾಗ ಮತ್ತು ಬಲಿದಾನದ ಫಲವಾಗಿ ಕರ್ನಾಟಕ ಏಕೀರಣವಾಗಿದೆ. ಅದರಲ್ಲಿ ವಿಶೇಷವಾಗಿ ಪ್ರಪ್ರಥಮ ಬಾರಿಗೆ ಮುಂಬೈ ವಿಧಾನಸಭೆಯಲ್ಲಿ ಕನ್ನಡಲ್ಲಿ ಮಾತನಾಡುವ ಮೂಲಕ ಅಂದಾನಪ್ಪ ದೊಡ್ಡಮೇಟಿ ಕರ್ನಾಟಕ ಏಕೀರಣದ ದೊಡ್ಡ ಮೇಟಿಯಾದರು ಎಂದು ಭೈರನಹಟ್ಟಿ ದೊರೆಸ್ವಾಮಿ ವಿರಕ್ತಮಠದ ಶಾಂತಲಿಂಗ ಸ್ವಾಮೀಜಿ ಹೇಳಿದರು.

ಸಮೀಪದ ಜಕ್ಕಲಿ ಗ್ರಾಮದ ದಿ. ಅಂದಾನಪ್ಪ ದೊಡ್ಡಮೇಟಿಯವರ ಸಮಾಧಿಗೆ ಪೂಜೆ ಸಲ್ಲಿಸಿ ನಂತರ ಎಸ್‌ಎಜೆಡಿ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಾರ ಶ್ರೀ ದೊರೆಸ್ವಾಮಿ ವಿರಕ್ತಮಠದ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ವತಿಯಿಂದ ಕರ್ನಾಟಕ ಸುವರ್ಣ ಸಂಭ್ರಮದ ನಿಮಿತ್ತ ಏಕೀಕರಣ ಯೋಧರ ಯಶೋಗಾಥೆ ಉಪನ್ಯಾಸ ಮಾಲಿಕೆಯ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಕನ್ನಡದ ಕುಲಪುರೋಹಿತ ಆಲೂರ ವೆಂಕಟರಾವ್, ಕರ್ನಾಟಕ ಕೇಸರಿ ಗಂಗಾಧರ ರಾವ್ ದೇಶಪಾಂಡೆ, ಪಾಟೀಲ ಪುಟ್ಟಪ್ಪ, ದಿ. ಅಂದಾನಪ್ಪ ದೊಡ್ಡಮೇಟಿ, ಅದರಗುಂಚಿ ಶಂಕರಗೌಡ್ರ ಸೇರಿದಂತೆ ಹಲವು ಹೋರಾಟಗಾರರ ಹೋರಾಟದ ಫಲವಾಗಿ ಕರ್ನಾಟಕ ಏಕೀರಣವಾಗಿದೆ. ಅವರ ತ್ಯಾಗ ಬಲಿದಾನವನ್ನು ಸ್ಮರಿಸುವ ಕಾರ್ಯವಾಗಬೇಕು. ಹಂಪಿಯ ತಾಯಿ ಭುವನೇಶ್ವರಿಯ ಪ್ರತಿರೂಪದಂತಿರುವ ಅಂದಾನಪ್ಪ ದೊಡ್ಡಮೇಟಿ ಪರಿಕಲ್ಪನೆಯಲ್ಲಿ ಕಲಾವಿದ, ಸಿ.ಎನ್. ಪಾಟೀಲ ವಿರಚಿತ ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಐತಿಹಾಸಿಕ ಹಿನ್ನಲೆ ಇದೆ. ಆ ಭಾವಚಿತ್ರವು ಸಮಗ್ರ ಕರ್ನಾಟಕವನ್ನು ಪ್ರತಿನಿಧಿಸುವ ಭಾವಚಿತ್ರವಾಗಿದ್ದು, ಅದನ್ನೇ ಕರ್ನಾಟಕದ ಅಧಿಕೃತ ಭಾವಚಿತ್ರವನ್ನಾಗಿಸುವಂತೆ ಅನೇಕ ಹೋರಾಟಗಳು ನಡೆದರೂ ಯಾವುದೇ ಪ್ರಯೋಜನವಾಗಿಲ್ಲ. ಇನ್ನಾದರೂ ರಾಜ್ಯ ಸರ್ಕಾರ ಜಕ್ಕಲಿಯಲ್ಲಿ ಕಳೆದ 50 ವರ್ಷಗಳಿಂದ ಪೂಜಿಸಲ್ಪಡುತ್ತಿರುವ ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಮನ್ನಣೆ ನೀಡುವತ್ತ ಗಮನ ಹರಿಸಬೇಕು ಎಂದರು.

ಶ್ರೀ ದೊರೆಸ್ವಾಮಿ ವಿರಕ್ತಮಠದ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ವತಿಯಿಂದ ಕರ್ನಾಟಕ ಸುವರ್ಣ ಸಂಭ್ರಮದ ನಿಮಿತ್ತ 50 ಜನ ಏಕೀಕರಣ ಹೋರಾಟಗಾರರ ಜೀವನ ಗಾಥೆಯನ್ನು ಜನರಿಗೆ ತಿಳಿಸುವ ಕಾರ್ಯವನ್ನು ಮಾಡಲಾಗುತ್ತಿದೆ ಎಂದರು.

ಸಮಾರಂಭವನ್ನು ಉದ್ಘಾಟಿಸಿ ಚಿಂತಕ ರವೀಂದ್ರನಾಥ ದೊಡ್ಡಮೇಟಿ, ನರಗುಂದ ಕಸಾಪ ಅಧ್ಯಕ್ಷ ಪಿ.ಸಿ. ಹನಮಂತಗೌಡ ಮಾತನಾಡಿದರು. ರೋಣ ತಾಲೂಕಾ ಕಸಾಪ ಅಧ್ಯಕ್ಷ ರಮಾಕಾಂತ ಕಮತಗಿ, ಕರವೇ ಅಧ್ಯಕ್ಷ ಉಮೇಶ ಮೇಟಿ, ಹರ್ಷವರ್ಧನ ದೊಡ್ಡಮೇಟಿ, ಸಂದೇಶ ದೊಡ್ಡಮೇಟಿ, ಮುಖ್ಯ ಶಿಕ್ಷಕ ಬಿ.ಆರ್. ಗದಗಿನ, ಚಿನಿವಾಲರ, ಆದರ್ಶ ಕುಲಕರ್ಣಿ, ಸಂಗಮೇಶ ಮೆಣಸಗಿ ಸೇರಿದಂತೆ ಇತರರಿದ್ದರು. ವಿ.ವಿ. ಅಣ್ಣಿಗೇರಿ, ಎ.ಪಿ. ಅಲಮೇಲ ನಿರ್ವಹಿಸಿದರು.

## ನ. 24ರೊಳಗೆ ಜಾತಿ ಗಣತಿ ವರದಿ ಸಲ್ಲಿಕೆ: ಜಯ ಪ್ರಕಾಶ್ ಹೆಗ್ಡೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿವಾದಿತ ಜಾತಿ ಗಣತಿ ವರದಿಯನ್ನು ನವೆಂಬರ್ 24 ರೊಳಗೆ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಶನಿವಾರ ಹೇಳಿದ್ದಾರೆ. ಆದಾಗ್ಯೂ, ಜನಗಣತಿ ಪರ ಅಥವಾ ವಿರೋಧವಾಗಿ ನೀಡಿರುವ ಹೇಳಿಕೆಗಳ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದರು. ಸುದ್ದಿಗಾರರೊಂದಿಗೆ ಮಾತನಾಡಿದ ಹೆಗ್ಡೆ, ಜಾತಿ ಗಣತಿ ವರದಿಯನ್ನು ಸರ್ಕಾರ ಅಂಗೀಕರಿಸುವುದಕ್ಕೆ ತೀವ್ರ ವಿರೋಧ ವ್ಯಕ್ತವಾಗುತ್ತಿರುವ ನಡುವೆ ಈ ರೀತಿಯ ಹೇಳಿಕೆ ನೀಡಿದರು.

ಜಾತಿ ಗಣತಿ ವರದಿಯನ್ನು ತಿರಸ್ಕರಿಸಲು ಮಠಾಧೀಶ ನಿರ್ಮಲಾನಂದನಾಥ ಸ್ವಾಮೀಜಿ ನೇತೃತ್ವದ ಒಕ್ಕಲಿಗ ಸಮುದಾಯ ಕೈಗೊಂಡಿರುವ ನಿರ್ಧಾರದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಸ್ವಾಮೀಜಿಯ ಪ್ರತಿಕ್ರಿಯೆಯ ಬಗ್ಗೆ ನನಗೆ ಏನೂ ಗೊತ್ತಿಲ್ಲ. ಯಾವ ಆಧಾರದಲ್ಲಿ ಬಿಜೆಪಿಯ ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಟೀಕೆ ಮಾಡಿದ್ದಾರೆ ಎಂದರು.

ನಿರ್ಮಲಾನಂದನಾಥ ಸ್ವಾಮೀಜಿ ಜಾತಿ ಗಣತಿ ವರದಿ ದೋಷಪೂರಿತ ಮತ್ತು ಅವೈಜ್ಞಾನಿಕ ಎಂದು ಕರೆದಿದ್ದು, ಮರು ಸಮೀಕ್ಷೆ ನಡೆಸುವಂತೆ ಸರ್ಕಾರವನ್ನು ಒತ್ತಾಯಿಸಿದ್ದಾರೆ.

# ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 5 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ:**

ವಾರ್ಡ ನಂ. 22ರಲ್ಲಿ ಗಂಗಿಮಡಿ ಮೇಲಿನ ಭಾಗ– ಕೆಳಗಿನ ಭಾಗ, ಬಸ್ ಸ್ಟಾಂಡ್ ಎದುರಿನ ಭಾಗ, 1400 ಮನೆಗಳ ಲೈನ್, 1600 ಮನೆ ಲೈನ್, 1800 ಮನೆ ಲೈನ್, 200 ಮನೆ ಲೈನ್, ಹಾಸ್ಟೆಲ್ ಲೈನ್, ವಾರ್ಡ ನಂ.3 ರಲ್ಲಿ ಜಮಾದಾರ ನಗರ, ವಾರ್ಡ್ ನಂ. 1ರಲ್ಲಿ ಎಸ್.ಎಮ್.ಕಷ್ಣಾ ನಗರ ಮೇಲಿನ ಭಾಗ–ಕೆಳಗಿನ ಭಾಗ ವಾರ್ಡ ನಂ. 25, 19,18,17 ರಲ್ಲಿ ಭಾವಿ ಮೆಂಬರ್ ಲೈನ್, ಹಾವನೂರ ಲೈನ್, ನಮಾಜಿಯವರ ಲೈನ್, ಹೊನ್ನಮ್ಮನವರ ಲೈನ್, ದುರ್ಗಮ್ಮನ ಗುಡಿ ಹಿಂದಿನ ಭಾಗ–1, ಭಾಗ–2 ಭಾಗ–3 ಕಾಗದಗೇರಿ, ಹೊಸ ಲೈನ್, ಹಳೇ ಲೈನ್, ಚವ್ಹಾಣದವರ ಲೈನ್, ವಾರ್ಡ್ ನಂ. 28ರಲ್ಲಿ ಎಸ್.ಎಸ್. ಪಾಟೀಲರ ಲೈನ್, ಅಪಾರ್ಟಮೆಂಟ್ ಲೈನ್, ಕಟ್ಟಿಯವರ ಲೈನ್, ಅಬ್ಬಿಗೇರಿಯವರ ಲೈನ್, ಗವಾಯಿಗಳ ಆಶ್ರಮ ಮುಂದಿನ ಭಾಗ, ದೇವಗಿರಿ ಸರ್ ಲೈನ್, ಸಂತೋಷ ಕಿರಾಣಿ ಲೈನ್, ಕೃಷ್ಣಾ ಟ್ಯೂಷನ್ ಲೈನ್, ಸೊಳ್ಳಾಪಟ್ಟಿಯವರ ಲೈನ್, ವಾರ್ಡ್ ನಂ. 30ರಲ್ಲಿ ರೋಣದವರ ಲೈನ್, ಕೇಶವ ನಗರ, ಪೊಲೀಸ್ ಕ್ವಾಟರ್ಸ್ ಲೈನ್, ವಾರ್ಡ್ ನಂ. 5, 6ರಲ್ಲಿ, ಗಣೇಶನಗರ,ಭಾಗ–1, ಭಾಗ–2, ಭಾಗ–3, ಭಾಗ–4. ಶಿವಾಜಿನಗರ ಭಾಗ–1,2,3,4 ಫಣಿಬಂದವರ ಲೈನ್, ತಟ್ಟಿಯವರ ಲೈನ್, ನಾವಲ್ಲಿಯವರ ಲೈನ್, ಮಳಳಿ ಪೂಜಾರ ಲೈನ್.

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯಾರ್ಥಿಗಳು, ಸಿಬ್ಬಂದಿ ಸದಸ್ಯರ ಮೇಲೆ ಛಾಪು ಮೂಡಿಸಿದ ಕಾರ್ಯಕ್ರಮ

# ಹುಬ್ಬಳ್ಳಿಯಲ್ಲಿ ರಸ್ತೆ ಸುರಕ್ಷತಾ ಜಾಗೃತಿ ಅಭಿಯಾನ



> ಸಮಾಜ ಬಯಸುವ ಕಂಪನಿಯಾಗಲು ಎಚ್‌ಎಂಎಸ್‌ಐ ಉದ್ದೇಶಿಸಿದೆ. ಇದರ ಭಾಗವಾಗಿ, ಶಾಲಾ ಮಕ್ಕಳಿಂದ ಹಿಡಿದು ಕಾರ್ಪೊರೇಟ್‌ಗಳು ಮತ್ತು ಒಟ್ಟಾರೆ ಸಮಾಜದ ಪ್ರತಿಯೊಂದು ವಿಭಾಗದ ಅಗತ್ಯವನ್ನು ಪೂರೈಸುವ ವಿಶಿಷ್ಟ ಆಲೋಚನೆಗಳೊಂದಿಗೆ ಸಮಾಜದ ಎಲ್ಲಾ ವರ್ಗಗಳಿಗೆ ರಸ್ತೆ ಸುರಕ್ಷತಾ ಜಾಗೃತಿ ಮೂಡಿಸುವುದರತ್ತ ಕಂಪನಿಯು ಗಮನ ಕೇಂದ್ರೀಕರಿಸಿದೆ.

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಹೋಂಡಾ ಮೋಟರ್ ಸೈಕಲ್ ಮತ್ತು ಸ್ಕೂಟರ್ ಇಂಡಿಯಾ (ಎಚ್‌ಎಂಎಸ್‌ಐ) ತನ್ನ ಜನ ಕೇಂದ್ರಿತ ಕಾರ್ಯವಿಧಾನವನ್ನು ವಿಸ್ತರಿಸುವ ಸಲುವಾಗಿ ಇತ್ತೀಚೆಗೆ ತನ್ನ ರಸ್ತೆ ಸುರಕ್ಷತಾ ಜಾಗೃತಿ ಅಭಿಯಾನ ನಡೆಸಿತು. ಹುಬ್ಬಳ್ಳಿ ನಗರದ ಹಚ್ಚ ಹಸಿರಿನ ರಸ್ತೆಗಳಲ್ಲಿ, ಕೆಎಲ್‌ಇ ಎಂ.ಆರ್. ಸಖರೆ ಸಿಬಿಎಸ್‌ಸಿ ಶಾಲೆಯ ಮೈದಾನದಲ್ಲಿ ನಡೆದ ಅಭಿಯಾನದಲ್ಲಿ 3 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳು ಸಕ್ರಿಯವಾಗಿ ಭಾಗವಹಿಸಿದರು. ಘೋಷಣೆ ಬರವಣಿಗೆ, ಪೋಸ್ಟರ್ ತಯಾರಿಕೆ ಸ್ಪರ್ಧೆ, ರಸ್ತೆ ಸುರಕ್ಷತಾ ರಸಪ್ರಶ್ನೆ ಮತ್ತು ಲೇಖನ ಬರೆಯುವ ಸ್ಪರ್ಧೆಯಂತಹ ನವೀನ ಚಟುವಟಿಕೆಗಳು ಪಾಲ್ಗೊಂಡವರನ್ನು ಅಭಿಯಾನದುದ್ದಕ್ಕೂ ಸಕ್ರಿಯರನ್ನಾಗಿರಿಸಿದವು.

ಪ್ರಾರಂಭದಿಂದ ಇದುವರೆಗೂ ರಾಜ್ಯದಲ್ಲಿ, ಎಚ್‌ಎಂಎಸ್‌ಐ ಸುಮಾರು 2 ಲಕ್ಷ ವಯಸ್ಕರು ಮತ್ತು ಮಕ್ಕಳಿಗೆ ಶಿಕ್ಷಣ ನೀಡಿದ್ದು, ಜವಾಬ್ದಾರಿಯುತ ರಸ್ತೆ ಬಳಕೆಯನ್ನು ಉತ್ತೇಜಿಸುವತ್ತ ಗಮನ ಹರಿಸಿದೆ. 2021ರಲ್ಲಿ, ಹೋಂಡಾ ಜಾಗತಿಕವಾಗಿ 2050ನೇ ವರ್ಷಕ್ಕಾಗಿ ಮುನ್ನೋಟದ ಧ್ಯೇಯವಾಕ್ಯವನ್ನು ಪ್ರಕಟಿಸಿತು. ಭಾರತದಲ್ಲಿ ಎಚ್‌ಎಂಎಸ್‌ಐ ಈ ಮುನ್ನೋಟದ ಜೊತೆಗೆ, 2030ರ ವೇಳೆಗೆ ಅಪಘಾತದಿಂದ ಉಂಟಾಗುವ ಸಾವುನೋವುಗಳನ್ನು ಅರ್ಧದಷ್ಟು ಕಡಿಮೆ ಮಾಡುವ ಭಾರತ ಸರ್ಕಾರದ ಆಶಯಕ್ಕೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತಿದೆ.

ಶಾಲೆಗಳು ಮತ್ತು ಕಾಲೇಜುಗಳಲ್ಲಿ ರಸ್ತೆ ಸುರಕ್ಷತಾ ಶಿಕ್ಷಣವೆಂದರೆ ಕೇವಲ ಜಾಗೃತಿ ಮೂಡಿಸುವುದು ಮಾತ್ರವಲ್ಲ. ಯುವ ಮನಸ್ಸುಗಳಲ್ಲಿ ಸುರಕ್ಷತಾ ಸಂಸ್ಕೃತಿಯನ್ನು ಬೆಳೆಸುವುದು ಮತ್ತು ಅವರನ್ನು ಸುರಕ್ಷತಾ ರಾಯಭಾರಿಯನ್ನಾಗಿ ಮಾಡುವುದು ಸಹ ಇದರ ಉದ್ದೇಶವಾಗಿದೆ. ಇದು ಭವಿಷ್ಯದ ಪೀಳಿಗೆಯನ್ನು ಜವಾಬ್ದಾರಿಯುತರನ್ನಾಗಿಸಲು ಮತ್ತು ಸುರಕ್ಷಿತ ಸಮಾಜಕ್ಕೆ ಗಮನಾರ್ಹವಾಗಿ ಕೊಡುಗೆ ನೀಡಲು ಸಶಕ್ತಗೊಳಿಸುತ್ತದೆ.

**ವೈಜ್ಞಾನಿಕವಾಗಿ ರೂಪಿಸಲಾದ ಕಲಿಕಾ ಮಾಡ್ಯೂಲ್:** ರಸ್ತೆ ಚಿಹ್ನೆಗಳು ಮತ್ತು ಗುರುತುಗಳು, ರಸ್ತೆಯಲ್ಲಿ ಚಾಲಕರ ಕರ್ತವ್ಯಗಳು, ಸವಾರಿ ಸಾಧನಗಳು ಮತ್ತು ಭಂಗಿಯ ಬಗ್ಗೆ ವಿವರಣೆ ಹಾಗೂ ಸುರಕ್ಷಿತ ಸವಾರಿ ಶಿಷ್ಟಾಚಾರಗಳ ಬಗ್ಗೆ ಥಿಯರಿ ಪಾಠಗಳ ಮೂಲಕ ಹೊಂದಾದ ನುರಿತ ಬೋಧಕರು ಸುರಕ್ಷಿತ ಸವಾರಿಗೆ ಅಡಿಪಾಯ ಹಾಕಿದರು.

**ಪ್ರಾಯೋಗಿಕ ಕಲಿಕೆ:** ಹೊಂದಾದ ವರ್ಚುವಲ್ ರೈಡಿಂಗ್ ಸಿಮ್ಯುಲೇಟರ್‌ನಲ್ಲಿ ನೈಜ ಸವಾರಿಗೆ ಮೊದಲು ರಸ್ತೆಯಲ್ಲಿ 100ಕ್ಕೂ ಹೆಚ್ಚು ಸಂಭವನೀಯ ಅಪಾಯಗಳ ಬಗ್ಗೆ ಅನುಭವ ಪಡೆಯಲು ಎಲ್ಲರಿಗೂ ಅವಕಾಶ ನೀಡಲಾಯಿತು.

**ಸಂವಾದಾತ್ಮಕ ಸೆಷನ್:** ಅಧಿವೇಶನದಲ್ಲಿ ಭಾಗವಹಿಸುವವರಿಗೆ ಕೈಕೆನ್ ಯೋಸೊಕು ತರಬೇತಿ(ಕೆವೈಟಿ) ಎಂದು ಕರೆಯಲ್ಪಡುವ ಅಪಾಯ ಮುನ್ಸೂಚನೆ ತರಬೇತಿ ನೀಡಲಾಯಿತು.

**ಚಾಲಕರ ಸವಾರಿ ಕೌಶಲ್ಯ ಸುಧಾರಣೆ:** ಈಗಾಗಲೇ ಚಾಲನಾ ಪರವಾನಗಿ ಹೊಂದಿರುವ ವಿದ್ಯಾರ್ಥಿಗಳು ಮತ್ತು ಶಾಲಾ ಸಿಬ್ಬಂದಿ/ಸದಸ್ಯರು ನಿಧಾನಗತಿಯ ಸವಾರಿ ಚಟುವಟಿಕೆಗಳು ಮತ್ತು ಕಿರಿದಾದ ಹಲಗೆಗಳ ಮೇಲೆ ಸವಾರಿ ಮಾಡುವ ಮೂಲಕ ತಮ್ಮ ಸವಾರಿ ಕೌಶಲ್ಯವನ್ನು ಪರೀಕ್ಷೆಗೆ ಒಳಪಡಿಸಿದರು.

# ವಿದ್ಯುತ್ ಮಗ್ಗ ಘಟಕ ಸ್ಥಾಪನೆಗೆ ಸಹಾಯಧನ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೈಮಗ್ಗ ಮತ್ತು ಜವಳಿ ಇಲಾಖೆಯ ನೇಕಾರರ ವಿಶೇಷ ಪ್ಯಾಕೇಜ ಯೋಜನೆ, ವಿಶೇಷ ಘಟಕ ಯೋಜನೆ, ಗಿರಿಜನ ಉಪಯೋಜನೆಯಡಿ ಹಾಲಿ ಕೈಮಗ್ಗ ನೇಕಾರರು, ವಿದ್ಯುತ್ ಮಗ್ಗ ನೇಕಾರಿಕೆಗೆ ಪರಿವರ್ತನೆಗೊಳ್ಳಲು ಮತ್ತು ಕೂಲಿ ವಿದ್ಯುತ್ ಮಗ್ಗ ನೇಕಾರರು ಸ್ವಂತ ವಿದ್ಯುತ್ ಮಗ್ಗ ಘಟಕ ಸ್ಥಾಪಿಸಿಕೊಳ್ಳಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರಿಗೆ ರೂ. 3.15 ಲಕ್ಷಗಳ ಸಹಾಯಧನ ನೀಡಲಾಗುವುದು. ಘಟಕ ವೆಚ್ಚ ರೂ. 3.50 ಲಕ್ಷಗಳಾಗಿದ್ದು, ಘಟಕ ಸ್ಥಾಪನೆಗೆ ರಾಷ್ಟ್ರೀಕೃತ ಬ್ಯಾಂಕುಗಳಿಂದ ರೂ.3.50ಲಕ್ಷ ಸಾಲ ಪಡೆಯಬೇಕು. ವಿದ್ಯುತ್ ಮಗ್ಗ ಘಟಕ ಸ್ಥಾಪಿಸುವ ಜಾಗೆಯು ಲೀಸ/ಬಾಡಿಗೆ ಆಧಾರದ ಮೇಲೆ ಪಡೆದಿದ್ದಲ್ಲಿ 05 ವರ್ಷಗಳ ಅವಧಿಗೆ ಸ್ಥಳೀಯ ನೊಂದಣಿ ಅಧಿಕಾರಿಗಳಿಂದ ನೊಂದಾಯಿತ ಬಾಡಿಗೆ/ಲೀಸ ದಾಖಲಾತಿ, ವಿದ್ಯುತ್ ಮಂಜೂರಾತಿ ಪತ್ರ, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್, ರೇಶನ್ ಕಾರ್ಡ್, ಸ್ಥಳೀಯ ಪ್ರಾಧಿಕಾರದಿಂದ ಪಡೆದ ಲೈಸೆನ್ಸ್/ಪರವಾನಿಗೆ ಇತ್ಯಾದಿ ದಾಖಲಾತಿಗಳೊಂದಿಗೆ ಆನ್‌ಲೈನ್ http://njn.karnatakadht.org/weavers/ej-2loom-apply ದಲ್ಲಿ ನವೆಂಬರ್ 15 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ನಂ–206 2ನೇ ಮಹಡಿ ಜಿಲ್ಲಾ ಆಡಳಿತ ಭವನ ಗದಗ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

# ಕಾರ್ಮಿಕರ ಅಪಘಾತ ಪರಿಹಾರ ಯೋಜನೆ ಸೌಲಭ್ಯಕ್ಕೆ ನಿರ್ವಾಹಕರು, ಕ್ಲೀನರ್‌ಗಳಿಗೂ ಅವಕಾಶ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಪಘಾತ ಪರಿಹಾರ ಸೌಲಭ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್ಸ್‌ಗಳು ನಿರಂತರವಾಗಿ ಅಪಘಾತಗಳಿಗೆ ತುತ್ತಾಗಿ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆಗಳು ಹೆಚ್ಚಾಗಿರುತ್ತದೆ. ಇಂತಹ ಕಾರ್ಮಿಕರು ಅಪಘಾತಕ್ಕಿಡಾಗಿ ಮರಣಕ್ಕೆ ತುತ್ತಾಗುವ, ಶಾಶ್ವತ ದುರ್ಬಲತೆ ಅಥವಾ ತಾತ್ಕಾಲಿಕ ದುರ್ಬಲತೆ ಹೊಂದಿದ ಸಂದರ್ಭದಲ್ಲಿ, ಅವರ ದುಡಿಮೆಯನ್ನೇ ಅವಲಂಬಿಸಿರುವ ಅವರ ಕುಟುಂಬವು ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕುತ್ತದೆ.

ಈ ಯೋಜನೆಯಡಿ ಸಾರಿಗೆ ಇಲಾಖೆಯಿಂದ ಕರ್ನಾಟಕ ರಾಜ್ಯದಲ್ಲಿ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲನಾ ಪರವಾನಗಿ ಪಡೆದ ಚಾಲಕರು ತಕ್ಷಣದಿಂದ ಫಲಾನುಭವಿ ಎಂದು ಪರಿಗಣಿಸುತ್ತಿದ್ದು, ನಿರ್ವಾಹಕರು ಹಾಗೂ ಕ್ಲೀನರ್‌ಗಳು ಯೋಜನೆಯಡಿ ಜಿಲ್ಲಾ ಕಾರ್ಮಿಕ ಅಧಿಕಾರಿಗಳು/ನೋಂದಣಾಧಿಕಾರಿಗಳಲ್ಲಿ ನೋಂದಾಯಿಸಬೇಕಾಗುತ್ತದೆ. ನಿರ್ವಾಹಕರು/ಕ್ಲೀನರ್‌ಗಳು ನೋಂದಣೆಯಾದ ನಂತರ ವೃತ್ತಿಯನ್ನು ಬದಲಾಯಿಸಿದಲ್ಲಿ ಫಲಾನುಭವಿಯಾಗಿ ಮುಂದುವರೆಯಲು ಅನರ್ಹರಾಗುತ್ತಾರೆ.

ಫಲಾನುಭವಿಯು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಅನುಸೂಚಿ 2ರಲ್ಲಿ ತಿಳಿಸಿರುವ ಕಾಯ್ದೆ ಒಳಪಟ್ಟಿರಬಾರದು ಮತ್ತು ಸದರಿ ಕಾಯ್ದೆಗೆ ಒಳಪಟ್ಟಿರುವುದಿಲ್ಲ ಎಂದು ಸ್ವಯಂ ಘೋಷಣೆಯನ್ನು ಒಪ್ಪಿ ಸಹಿ ಮಾಡಬೇಕು

ಈ ಯೋಜನೆಯಡಿ ನಿರ್ವಾಹಕರು ಮತ್ತು ಕ್ಲೀನರ್‌ಗಳು ಷರತ್ತುಗಳನ್ವಯ ಅರ್ಹತೆಯುಳ್ಳ ಕಾರ್ಮಿಕರು ಅಗತ್ಯ ದಾಖಲೆಗಳೊಂದಿಗೆ ಕಾರ್ಮಿಕ ಅಧಿಕಾರಿಯವರ ಕಚೇರಿ, ಜಿಲ್ಲಾಡಳಿತ ಭವನ ಗದಗ 1ನೇ ಮಹಡಿ, ಕೊಠಡಿ ಸಂಖ್ಯೆ–124 ಆಗಮಿಸಿ ನೋಂದಣಿ ಮಾಡಿಸಿಕೊಳ್ಳುವುದು. ಆಕಸ್ಮಿಕ ಅಪಘಾತಕ್ಕಿಡಾದ ಸಂದರ್ಭದಲ್ಲಿ ಈ ಯೋಜನೆಯಡಿ ದೊರೆಯುವ ಸೌಲಭ್ಯಗಳನ್ನು ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಅಧಿಕಾರಿಯವರ ಕಚೇರಿ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ 124, 1 ನೇ ಮಹಡಿ, ಹುಬ್ಬಳ್ಳಿ ರಸ್ತೆ, ಗದಗ ದೂರವಾಣಿ ಸಂಖ್ಯೆ 08372–233480 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಭೀಮರಾವ ಆರ್ ಜಾಧವ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೌರವರಕ್ಷೆ ಸ್ವೀಕರಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರೈಸಿದರ ಹಿನ್ನಲೆಯಲ್ಲಿ ಶುಕ್ರವಾರದಂದು ಗದುಗಿನ ದಿ.ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಕನ್ನಡ ಸಂಭ್ರಮ–50 ಆಯೋಜಿಸಲಾಗಿತ್ತು. ಕಾರ್ಯಕ್ರಮದ ನಂತರ ನಾಗಾವಿಯಲ್ಲಿನ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಕೇಂದ್ರ–2 ಕಟ್ಟಡದ ಶಿಲಾನ್ಯಾಸ ನೆರವೇರಿಸಿದ ನಂತರ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಪೊಲಿಸ ಇಲಾಖೆ ವತಿಯಿಂದ ಗೌರವ ರಕ್ಷೆ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ, ಶಾಸಕ ಜಿ.ಎಸ್.ಪಾಟೀಲ, ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್., ಬೆಳಗಾವಿ ಉತ್ತರ ವಲಯದ ಆರಕ್ಷಕ ಮಹಾ ನೀರಿಕ್ಷಕ ವಿಕಾಸಕುಮಾರ ವಿಕಾಸ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

# ಮೀನುಗಾರಿಕೆ ಸಚಿವರಿಂದ ಪ್ರಗತಿ ಪರಿಶೀಲನಾ ಸಭೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದಲ್ಲಿ ನಡೆದ ಕರ್ನಾಟಕ ಸಂಭ್ರಮ–50 ರ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವರಾದ ಮಂಕಾಳ ಎಸ್. ವೈದ್ಯ, ಗದಗ ಜಿಲ್ಲಾ ಪಂಚಾಯತ ಸಭಾಂಗಣ ವಿ.ಸಿ. ಹಾಲ್ ದಲ್ಲಿ ಶುಕ್ರವಾರದಂದು ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು, ಗದಗ ಹಾಗೂ ಬಾಗಲಕೋಟೆ ಜಿಲ್ಲೆಗಳ ಮೀನುಗಾರಿಕೆ ಇಲಾಖಾ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ಜಿಲ್ಲಾವಾರು ಪ್ರಗತಿಯನ್ನು ಪರಿಶೀಲಿಸಿ ಅಧಿಕಾರಿಗಳಿಗೆ ನಿಗದಿತ ಅವಧಿಯಲ್ಲಿ ಎಲ್ಲಾ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸೂಚಿಸಿದರು.

ಇಲಾಖೆಯ ಕುಂದು–ಕೊರತೆಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಮೀನುಗಾರಿಕೆ ನಿರ್ದೇಶಕರಾದ ದಿನೇಶ ಕಳ್ಳೇರ್‌ರವರು ಉಪಸ್ಥಿತರಿದ್ದರು. ಮೀನುಗಾರಿಕೆ ಜಂಟಿ ನಿರ್ದೇಶಕರುಗಳು, ಮೀನುಗಾರಿಕೆ ಉಪ ನಿರ್ದೇಶಕರುಗಳು, ಮೀನುಗಾರಿಕೆ ಸಹಾಯಕ ನಿರ್ದೇಶಕರುಗಳು ಹಾಗೂ ಮೀನುಮರಿ ಉತ್ಪಾದನಾ ಕೇಂದ್ರಗಳ ಅಧಿಕಾರಿಗಳು ಹಾಜರಿದ್ದರು.

# ಗದಗ-ಬೆಟಗೇರಿ ನಗರಸಭೆ ವತಿಯಿಂದ ಮುಖ್ಯಮಂತ್ರಿ ಸಿದ್ಧರಾಮಯ್ಯನವರಿಗೆ ಪೌರಸಮ್ಮಾನ




**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರೈಸಿದರ ಹಿನ್ನಲೆಯಲ್ಲಿ ಶುಕ್ರವಾರದಂದು ಗದುಗಿನ ದಿ.ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಆಯೋಜಿಸಲಾಗಿದ್ದ ಭವ್ಯ ಸಮಾರಂಭದಲ್ಲಿ ಗದಗ–ಬೆಟಗೇರಿ ನಗರಸಭೆ ವತಿಯಿಂದ ಸಮಸ್ತ ಅವಳಿ ನಗರದ ಜನತೆಯ ಪರವಾಗಿ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರಿಗೆ ಪೌರಸಮ್ಮಾನ ಮಾಡಲಾಯಿತು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ ಸೇರಿದಂತೆ ಸಚಿವ ಸಂಪುಟದ ಅನೇಕ ಸಚಿವರುಗಳು, ಗದಗ–ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ನಗರಸಭೆ ಸದಸ್ಯರುಗಳು ಉಪಸ್ಥಿತರಿದ್ದರು.

# ಕರ್ನಾಟಕ ನಾಮಕರಣ ಮಹೋತ್ಸವ ಪುಸ್ತಕ ಬಿಡುಗಡೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರೈಸಿದರ ಹಿನ್ನಲೆಯಲ್ಲಿ ಶುಕ್ರವಾರದಂದು ಗದುಗಿನ ದಿ.ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಕರ್ನಾಟಕ ಸಂಭ್ರಮ–50 ಆಯೋಜಿಸಲಾಗಿದ್ದ ಭವ್ಯ ಸಮಾರಂಭದಲ್ಲಿ ಕರ್ನಾಟಕ ನಾಮಕರಣ ಮಹೋತ್ಸವದ ಪುಸ್ತಕ, ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಹತ್ತು ಜಿಲ್ಲೆಗಳ ಗ್ರಾಚರಿತ ಕೋಶವನ್ನು ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ ಸೇರಿದಂತೆ ಸಚಿವ ಸಂಪುಟದ ಸಚಿವರುಗಳು ಉಪಸ್ಥಿತರಿದ್ದರು.

# ಸುವರ್ಣ ಸ್ಥಂಭ ಅನಾವರಣಗೊಳಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ





**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರೈಸಿದರ ಹಿನ್ನಲೆಯಲ್ಲಿ ಶುಕ್ರವಾರದಂದು ಗದುಗಿನ ಆಯೋಜಿಸಲಾಗಿದ್ದ ಭವ್ಯ ಸಮಾರಂಭಕ್ಕೂ ಮುನ್ನ ಗದುಗಿನ ವೀರನಾರಾಯಣ ದೇವಸ್ಥಾನದಲ್ಲಿ ಕನ್ನಡ ಜ್ಯೋತಿಗೆ ಹಾಗೂ ವೀರನಾರಾಯಣನಿಗೆ ಪೂಜೆ ಸಲ್ಲಿಸಿ ಮೆರವಣಿಗೆಗೆ ಚಾಲನೇ ನೀಡಲಾಯಿತು.

ಮೆರವಣಿಗೆ ಮಾರ್ಗ ಮಧ್ಯೆ ಭೂಮರಡ್ಡಿ ವೃತ್ತದಲ್ಲಿ ಕರ್ನಾಟಕ ಸಂಭ್ರಮ–50ರ ಸವಿ ನೆನಪಿಗಾಗಿ ನಿರ್ಮಿಸಲಾದ ಕರ್ನಾಟಕ ಸ್ಥಂಭವನ್ನು ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರು ಅನಾವರಣಗೊಳಿಸಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ ಸೇರಿದಂತೆ ಸಚಿವ ಸಂಪುಟದ ಅನೇಕ ಸಚಿವರುಗಳು ಉಪಸ್ಥಿತರಿದ್ದರು.

# ಪೂಜ್ಯರ ಆಶೀರ್ವಾದ ಪಡೆದ ಮುಖ್ಯಮಂತ್ರಿ ಸಿದ್ಧರಾಮಯ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರೈಸಿದರ ಹಿನ್ನಲೆಯಲ್ಲಿ ಶುಕ್ರವಾರದಂದು ಗದುಗಿನ ಆಯೋಜಿಸಲಾಗಿದ್ದ ಭವ್ಯ ಸಮಾರಂಭದ ನಂತರ ಮುಖ್ಯ ಮಂತ್ರಿಗಳಾದ ಸಿದ್ಧರಾಮಯ್ಯನವರು ಗದುಗಿನ ತೋಂಟದಾರ್ಯ ಮಠಕ್ಕೆ ಭೇಟಿ ನೀಡಿ ಪೂಜ್ಯರಿಂದ ಆಶೀರ್ವಾದ ಪಡೆದರು. ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ ಸೇರಿದಂತೆ ಸಚಿವ ಸಂಪುಟದ ಅನೇಕ ಸಚಿವರುಗಳು ಉಪಸ್ಥಿತರಿದ್ದರು.

### ಹಣ ಪಡೆದು ಸೈಟ್ ಕೊಡದ ಬೆಂಗಳೂರಿನ ಹೌಸಿಂಗ್ ಫೆಡರೇಷನ್

# ದಂಡ ವಿಧಿಸಿ ಆದೇಶ ನೀಡಿದ ಗ್ರಾಹಕ ಆಯೋಗ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲೆಯ ನವಲಗುಂದ ತಾಲೂಕಿನ ನಾಗನೂರ ಗ್ರಾಮದ ನಿವಾಸಿ ಅಶೋಕ ಕರಮಳ್ಳಿ ಎಂಬುವವರು ಸ್ಥಳೀಯ ಶ್ರೀ ಕುಮಾರೇಶ್ವರ ಗೃಹನಿರ್ಮಾಣ ಅಭಿವೃದ್ಧಿ ಸಹಕಾರಿ ಸಂಘದವರು ಪರಿಚಯಿಸಿದ ಬೆಂಗಳೂರಿನ ಕರ್ನಾಟಕ ರಾಜ್ಯ ಕೋ–ಆಪ್ ಹೌಸಿಂಗ್ ಫೆಡರೇಷನ್ ಲಿ. ಇವರಲ್ಲಿ 40*60 ಅಳತೆಯ ಸೈಟಿಗೆ 2012ರಲ್ಲಿ ಅರ್ಜಿ ಸಲ್ಲಿಸಿ, ಮುಂಗಡ ಹಣವಾಗಿ ರೂ.9,02,000ಗಳನ್ನು ಸಂದಾಯ ಮಾಡಿದ್ದರು.

ಸೈಟಿನ ಬೆಲೆ ಹೆಚ್ಚಾಗಿದ್ದರಿಂದ ದೂರುದಾರ ತನ್ನ ಇಚ್ಛೆಯನ್ನು ಬದಲಿಸಿ 30*50 ಅಳತೆಯ ಸೈಟಿಗೆ ಅರ್ಜಿ ಸಲ್ಲಿಸಿದ್ದರು. ಫಿರ್ಯಾದಿದಾರ ಸೈಟಿನ ಎಲ್ಲ ಹಣವನ್ನು ಕೊಟ್ಟಿದ್ದರೂ ಸಹ ಕ್ರಯಪತ್ರ ಮಾಡಿಕೊಡದೇ ನಾನಾ ರೀತಿಯ ಕಾರಣ ಹೇಳಿ ಸೈಟಿನ ಖರೀದಿ ಪತ್ರ ಮಾಡಿಕೊಟ್ಟಿರಲಿಲ್ಲ.

ಹೌಸಿಂಗ್ ಫೆಡರೇಷನ್‌ನವರ ಈ ನಡಾವಳಿಕೆ ಗ್ರಾಹಕರ ಸಂರಕ್ಷಣಾ ಕಾಯ್ದೆಯಡಿ ಸೇವಾ ನ್ಯೂನತೆಯಾಗಿದ್ದು, ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ 6–3–2023ರಂದು ದೂರು ಸಲ್ಲಿಸಿದ್ದರು.

ತಾವು ಫೆಡರೇಷನ್ ಇದ್ದು ತಮ್ಮೊಂದಿಗೆ ದೂರುದಾರ ವ್ಯವಹರಿಸಿದ್ದರೂ ಸಹ ಅವನು ಗ್ರಾಹಕರ ಅರ್ಥ ವಿವರಣೆಯಲ್ಲಿ ಬರುವುದಿಲ್ಲ ಅಂತಾ ಹೇಳಿ ದೂರನ್ನು ವಜಾ ಮಾಡುವಂತೆ ಎದುರುದಾರರು ಕೋರಿಕೊಂಡಿದ್ದರು. ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ ಹಾಗೂ ಸದಸ್ಯರಾದ ವಿಶಾಲಾಕ್ಷಿ ಬೋಳಶೆಟ್ಟಿ ಮತ್ತು ಪ್ರಭು.ಸಿ. ಹಿರೇಮಠ ಅವರು ದೂರುದಾರ–ರಿಂದ ರೂ.9,02,000 ಹಣ ಪಡೆದುಕೊಂಡು ಎದುರುದಾರರು ಅವರಿಗೆ ಸೈಟಿನ ಖರೀದಿ ಪತ್ರ ನೋಂದಣಿ ಮಾಡಿಕೊಡಲು ವಿಫಲರಾಗಿರುವುದು ಮತ್ತು ದೂರುದಾರನಿಗೆ ಹಣವನ್ನು ಹಿಂತಿರುಗಿಸದೆ ಇರುವುದು ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನತೆ ಆಗುತ್ತದೆ ಎಂದು ಅಭಿಪ್ರಾಯಪಟ್ಟು ತೀರ್ಪು ನೀಡಿದೆ.

ದೂರುದಾರರು ಸಂದಾಯ ಮಾಡಿದ ರೂ 9,02,000 ಮತ್ತು ಅದರ ಮೇಲೆ ಪೂರ್ತಿ ಹಣ ಸಂದಾಯವಾಗುವವರೆಗೆ ಶೇ 8ರಂತೆ ವಾರ್ಷಿಕ ಬಡ್ಡಿ ಲೆಕ್ಕ ಹಾಕಿ ತೀರ್ಪು ನೀಡಿದ ಒಂದು ತಿಂಗಳ ಒಳಗಾಗಿ ಕೊಡುವಂತೆ ಆಯೋಗ ಎದುರುದಾರರಿಗೆ ಆದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲತೆ ಮತ್ತು ಮಾನಸಿಕ ಹಿಂಸೆಗಾಗಿ ರೂ 1 ಲಕ್ಷ ಪರಿಹಾರ ಹಾಗೂ ಪ್ರಕರಣದ ಖರ್ಚು–ವೆಚ್ಚವೆಂದು ರೂ 10,000 ನೀಡುವಂತೆ ಆಯೋಗ ತನ್ನ ತೀರ್ಪಿನಲ್ಲಿ ಆದೇಶಿಸಿದೆ.

# ಬೆಂಗಳೂರಿನಲ್ಲಿ ಪಾಕ್‌ಗೆ ಒಲಿದ ಅದೃಷ್ಟ, ಕಿವೀಸ್ ವಿರುದ್ಧ 21 ರನ್ ಗೆಲುವು, ಸೆಮೀಸ್ ಆಸೆ ಜೀವಂತ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಇಲ್ಲಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಶನಿವಾರ ನಡೆದ ಐಸಿಸಿ ವಿಶ್ವಕಪ್ ಕ್ರಿಕೆಟ್ ಟೂರ್ನಿಯ 35ನೇ ಪಂದ್ಯದಲ್ಲಿ ಪಾಕಿಸ್ತಾನಕ್ಕೆ ಅದೃಷ್ಟ ಒಲಿದಿದ್ದು, ಡಕ್‌ವರ್ತ್ ಲೂಯಿಸ್ ನಿಯಮ ಬಳಸಿ ನ್ಯೂಜಿಲೆಂಡ್ ತಂಡವನ್ನು 21 ರನ್ ಗಳಿಂದ ಸೋಲಿಸಿದೆ. ಈ ಮೂಲಕ ಸೆಮಿಫೈನಲ್ ಆಸೆಯನ್ನು ಇನ್ನೂ ಜೀವಂತವಾಗಿರಿಸಿಕೊಂಡಿದೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್ ತಂಡ 6 ವಿಕೆಟ್ ನಷ್ಟಕ್ಕೆ 401 ರನ್ ಗಳಿಸಿತ್ತು. ಕಿವೀಸ್ ಪರ ರಚಿನ್ ರವೀಂದ್ರ 108 ರನ್‌ಗಳ ಅದ್ಭುತ ಆಟ ಪ್ರದರ್ಶಿಸಿದರು. ಕಿವೀಸ್ ನೀಡಿದ 402 ರನ್ ಗಳ ಗೆಲುವಿನ ಬೆನ್ನಟ್ಟಿದ್ದ ಪಾಕಿಸ್ತಾನ ಆಡುವಾಗ ಎರಡು ಬಾರಿ ಮಳೆಯಿಂದಾಗಿ ಪಂದ್ಯ ಸ್ಥಗಿತಗೊಂಡಿತ್ತು.

ಆಟ ನಿಲ್ಲಿಸುವ ಹೊತ್ತಿಗೆ ಪಾಕಿಸ್ತಾನ 25.3 ಓವರ್‌ಗಳಲ್ಲಿ ಒಂದು ವಿಕೆಟ್‌ಗೆ 200 ರನ್ ಗಳಿಸಿತ್ತು. ನಾಯಕ ಬಾಬರ್ ಅಜಮ್ ಅಜೇಯ 66 ಹಾಗೂ ಪಾಕರ್ ಜಮಾನ್ ಅಜೇಯ 126 ರನ್ ಗಳಿಸಿದರು.

# ಕನ್ನಡ ನಾಡು-ನುಡಿಯ ಬಗ್ಗೆ ಬದ್ಧತೆಯಿರಲಿ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಪ್ರತಿಯೊಬ್ಬರಲ್ಲಿ ಕನ್ನಡ ನಾಡು-ನುಡಿ, ಮಣ್ಣಿನ ಬಗ್ಗೆ ಅಭಿಮಾನ ಇರಬೇಕು. ನಾಡು ಉಳಿಯಬೇಕೆಂದರೆ ಭಾಷೆ ಉಳಿಯಬೇಕು. ಭಾಷೆ ಉಳಿಯುವುದಕ್ಕಾಗಿ ಕನ್ನಡ ನಾಡಿನ ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಸಮಾಜ ಸೇವಕ ಶರಣು ಬಂಡಿಹಾಳ ಹೇಳಿದರು.

ಡಂಬಳ ಗ್ರಾಮದ ಕಾರಿಶಿದ್ದೇಶ್ವರ ರಂಗಮಂದಿರದ ಆವರಣದಲ್ಲಿ ಕನ್ನಡ ರಾಜ್ಯೋತ್ಸವದ ನಿಮಿತ್ತ ತಾಯಿ ಭುವನೇಶ್ವರ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆಗೈದು ಮಾತನಾಡಿದ ಅವರು, ಕನ್ನಡ ಭಾಷೆ ಇಂದು ವಿಶ್ವವ್ಯಾಪಿಯಾಗಿ ಬೆಳೆದಿದೆ. ಕನ್ನಡ ನಾಡು-ನುಡಿ ಬಗ್ಗೆ ಪ್ರೀತಿ, ಅಭಿಮಾನ ಹಾಗೂ ಬದ್ಧತೆ ಇರಬೇಕು ಎಂದು ಹೇಳಿದರು. ಗ್ರಾ.ಪಂ ಸದಸ್ಯ ಕುಮಾರ ಮಾನೆ, ಮಳ್ಳಪ್ಪ ಒಂಟಲಭೋವಿ, ಇಬ್ರಾಹಿಂ ಹೋಸಪೇಟಿ ಮಾತನಾಡಿದರು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಭುವನೇಶ್ವರಿಯ ಮತ್ತು ಪುನಿತ್ ರಾಜಕುಮಾರ ಅವರ ಭಾವಚಿತ್ರದ ಮೇರವಣಿಗೆ ಜರುಗಿ-ತು. ಕಾರ್ಯಕ್ರಮದಲ್ಲಿ ವೇ.ಮೂ ರಾಜಶೇಖರಯ್ಯ ಹಿರೇಮಠ, ಗವಿಸಿದ್ದಪ್ಪ ಮಠದ, ಗೋವಿಂದಪ್ಪ ಆನಿ, ರಾಜು ಲಕ್ಕುಂಡಿ, ವಿಜಯ ಹಾದಿಮನಿ, ಮಹೇಶ ಬಿಸನಳ್ಳಿ, ಪ್ರಕಾಶ ಕೋತಂಬ್ರಿ, ಶಿವಾನಂದ ಬಂಡಿ, ಮಲ್ಲಪ್ಪ ಮಠದ, ನಾಗಪ್ಪ ಏಣಗಿ, ಹನಮಂತಪ್ಪ ಚವಡಕಿ ಗ್ರಾಮದ ಯುವಕರು ಇದ್ದರು.

# ಅನಿಲ್ ಅಬ್ಬಿಗೇರಿ, ಪ್ರಕಾಶ ಅಂಗಡಿಯವರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಳೇ ಸರಾಫ ಬಜಾರ ಕರೂಗಲ್ ಓಣಿಯ ಶ್ರೀ ಸಾಯಿ ಸೇವಾ ಸಮಿತಿ ವತಿಯಿಂದ ಗದಗ ಬೆಟಗೇರಿ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಆಯ್ಕೆಯಾದ 28ನೇ ವಾರ್ಡಿನ ನಗರಸಭಾ ಸದಸ್ಯರಾದ ಅನಿಲ್ ಅಬ್ಬಿಗೇರಿ ಹಾಗೂ ಹೈಸ್ಕೂಲ್ ಕಮಿಟಿ ಚೇರಮನ್‌ರಾಗಿ ಆಯ್ಕೆಯಾದ ಪ್ರಕಾಶ ಅಂಗಡಿ ಅವರನ್ನು ಸನ್ಮಾನಿಸಲಾಯಿತು.

ಓಣಿಯ ಹಿರಿಯರಾದ ಮುರುಗೆಪ್ಪ ಕರೂಗಲ್ ಮಾತನಾಡಿ ಶುಭ ಹಾರೈಸಿದರು. ಸಾಯಿ ಸೇವಾ ಸಮಿತಿ ಅಧ್ಯಕ್ಷ ಸಂತೋಷ ಕಬಾಡರ ಹಾಗೂ ನಗರಸಭಾ ಸದಸ್ಯ ನಾಗರಾಜ ತಳವಾರ ಮಾತನಾಡಿ, ಜನಸೇವೆಗೆ ಸಿಕ್ಕ ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಿ ಎಂದರು.

ಈ ಸಂದರ್ಭದಲ್ಲಿ ಸಾಯಿ ಸೇವಾ ಸಮಿತಿಯ ಕಾರ್ಯದರ್ಶಿ ಮಂಜುನಾಥ ಮಜ್ಜಿಗುಡ್ಡ, ಸಹ ಕಾರ್ಯದರ್ಶಿ ಸುನೀಲ್ ಮುಳ್ಳಾಳ, ಖಜಾಂಚಿ ಮಹೇಶ ಕೋರಿ, ಸದಸ್ಯರಾದ ಬಾಬು ಸುಲಾಖೆ, ಈರಪ್ಪ ಕೊಡ್ಲಿ, ಸುರೇಶ ಚಿತ್ರಗಾರ, ವಿನಾಯಕ ಹಬೀಬ, ಗಿರಿಧರ ನರಸಾಪೂರ, ಪ್ರಸಾದ ಅಬ್ಬಿಗೇರಿ, ಸಂಜು ಸೊರಟೂರ, ಅಪ್ಪು ಕೋಟಗಿ, ವಿಜಯ ಅಬ್ಬಿಗೇರಿ ಮುಂತಾದವರಿದ್ದರು. ಶಂಕರ ಮಲ್ಲಸಮುದ್ರ ಸ್ವಾಗತಿಸದರು. ಅನಿಲ ಮುಳ್ಳಾಳ ವಂದಿಸಿದರು.

# ಜಿಮ್ಸ್ ನಿರ್ದೇಶಕ ಬಿ.ಎಸ್. ಬೊಮ್ಮನಳ್ಳಿಯವರನ್ನು ವಜಾಗೊಳಿಸಲು ಆಗ್ರಹ



■ ವಿಜಯಸಾಕ್ಷಿ ಸುದ್ದಿ, ಗದಗ

ದಲಿತ ವಿರೋಧಿ ನೀತಿ ಅನುಸರಿಸುತ್ತಿರುವ ಜಿಮ್ಸ್ ನಿರ್ದೇಶಕ ಬಿ.ಎಸ್. ಬೊಮ್ಮನಳ್ಳಿಯವರನ್ನು ಸೇವೆಯಿಂದ ಅಮಾನತ್ತುಗೊಳಿಸಬೇಕೆಂದು ಎಸ್.ಸಿ-ಎಸ್.ಟಿ ದೌರ್ಜನ್ಯ ಪ್ರತಿಬಂಧಕ ಕಾಯ್ದೆ 1989ರ ಗದಗ ಜಿಲ್ಲಾ ಜಾಗ್ರತ ಹಾಗೂ ಉಸ್ತುವಾರಿ ಸಮಿತಿ ಸದಸ್ಯ ಸುರೇಶ ವಾಯ್.ಚಲವಾದಿ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಶುಕ್ರವಾರ ಜಿಮ್ಸ್‌ನ ನೂತನ ಆಸ್ಪತ್ರೆಯ ಉದ್ಘಾಟನೆಗೆ ಆಗಮಿಸಿದ ಮುಖ್ಯಮಂತ್ರಿಗಳನ್ನು ಬರಮಾಡಿಕೊಳ್ಳಲು ದಲಿತ ಸಮುದಾಯದ ಸಿಬ್ಬಂದಿಗಳು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಭಾವಚಿತ್ರ ಹಿಡಿದು ಸ್ವಾಗತಿಸುತ್ತಿದ್ದ ವೇಳೆ ಜಿಮ್ಸ್ ನಿರ್ದೇಶಕರು ಇದಕ್ಕೆ ಅಡ್ಡಿಪಡಿಸಿರುವುದು ನಾಚಿಕೆಗೇಡಿನ ಸಂಗತಿ. ಜಿಲ್ಲಾಡಳಿತ ಇಂತಹ ಜಾತಿವಾದಿ ಜಿಮ್ಸ್ ನಿರ್ದೇಶಕರನ್ನು ಅಮಾನತ್ತುಗೊಳಿಸದೇ ಹೋದಲ್ಲಿ ದಲಿತ ಸಮುದಾಯ ಜಿಲ್ಲೆಯಾದ್ಯಂತ ಪ್ರತಿಭಟನೆ ಹಮ್ಮಿಕೊಳ್ಳುತ್ತದೆ ಎಂದು ಜಿಲ್ಲಾ ದಲಿತ ಯುವ ಮುಖಂಡ ರಮೇಶ ಕಡೇಮನಿ, ದಲಿತ ವಿದ್ಯಾರ್ಥಿ ಪರಿಷತ್ ಜಿಲ್ಲಾ ಉಪಾಧ್ಯಕ್ಷ ಲಕ್ಷ್ಮಣ ಪೂಜಾರ, ಪ್ರಧಾನ ಕಾರ್ಯದರ್ಶಿ ಬಸವರಾಜ ಮುಳ್ಳಾಳ, ಶ್ರೀಕಾಂತ ಪೂಜಾರ, ಅಪ್ಪು ಹಿತ್ತಲಮನಿ, ಶಿವಾನಂದ ಅಳವಂಡಿ, ಪಕ್ಕೀರೇಶ ಹಾದಿಮನಿ, ರಾಜು ರಂಗಣ್ಣವರ, ಸಂಜೀವ ದೊಡ್ಡಮನಿ, ರಮೇಶ ನಂದಿ, ಅಭಿಷೇಕ ಕೊಪ್ಪದ ಮುಂತಾದವರು ಒತ್ತಾಯಿಸಿದ್ದಾರೆ.

# 'ಸುವರ್ಣ ಸಂಭ್ರಮ' ಐತಿಹಾಸಿಕ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸುವರ್ಣ ಸಂಭ್ರಮ ಆಚರಣೆಯ ಐತಿಹಾಸಿಕ ಕ್ಷಣವನ್ನು ಮರುಕಳಿಸುವಂತೆ ಗದಗ ಜಿಲ್ಲೆಯಲ್ಲಿ ಆಯೋಜಿಸಿ ಯಶಸ್ವಿಯಾದ ರಾಜ್ಯ ಸರ್ಕಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಗೆ ಜನಶಕ್ತಿ ವೇದಿಕೆ ರಾಜ್ಯಾಧ್ಯಕ್ಷ ಸೈಯದ್ ಖಾಲಿದ್ ಕೊಪ್ಪಳ ಅಭಿನಂದನೆಗಳನ್ನು ತಿಳಿಸಿದ್ದಾರೆ.

ನಗರದಲ್ಲಿ ಹಬ್ಬದ ವಾತಾವರಣ ಸೃಷ್ಟಿಸಿ, ಅನೇಕ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆಯ ಮೂಲಕ ಉತ್ತರ ಕರ್ನಾಟಕದ ಕಲಾವಿದರಿಗೆ ವೇದಿಕೆಯನ್ನು ಸೃಷ್ಟಿಸಿದ್ದು ಐತಿಹಾಸಿಕವಾಗಿದೆ. ಜಿಲ್ಲಾಡಳಿತವೂ ಕೂಡ ಎಲ್ಲ ವ್ಯವಸ್ಥೆಗಳನ್ನೂ ಅಚ್ಚುಕಟ್ಟಾಗಿ ನಿರ್ವಹಿಸಿದ್ದು, ಅವರಿಗೂ ಕೂಡ ಅಭಿನಂದನೆಗಳನ್ನು ತಿಳಿಸಿದ್ದಾರೆ.

# ಗೀತಾ ಸಾವಕಾರರಿಗೆ ಯೋಗ ಡಿಪ್ಲೋಮಾದಲ್ಲಿ ಚಿನ್ನದ ಪದಕ



■ ವಿಜಯಸಾಕ್ಷಿ ಸುದ್ದಿ, ಗದಗ

2021-22ನೇ ಸಾಲಿಗೆ ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಇವರು ಪಿ.ಜಿ ಡಿಪ್ಲೋಮಾ ಇನ್ ಯೋಗ ಸ್ಟಡೀಸ್ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಗಳಿಸಿದವರಿಗೆ ಕೊಡುವ ಶ್ರೀಮತಿ ಅರುಣಾ ಮತ್ತು ಪ್ರೊ. ಎಸ್.ಟಿ. ನಂದಿಬೇವೂರ ಚಿನ್ನದ ಪದಕವನ್ನು ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರದ ವಿದ್ಯಾರ್ಥಿ ಗೀತಾ ಸಾವಕಾರ ಇವರು ಪಡೆದಿದ್ದಾರೆ.

ಇತ್ತೀಚಿಗೆ ಕರ್ನಾಟಕ ವಿಶ್ವವಿದ್ಯಾಲಯ ಆವರಣದಲ್ಲಿನ ಗಾಂಧಿ ಭವನದಲ್ಲಿ ಜರುಗಿದ 73ನೇ ಘಟಿಕೋತ್ಸವದಲ್ಲಿ ಗೌರವಾನ್ವಿತ ಕುಲಾಧಿಪತಿಗಳು ಹಾಗೂ ಕರ್ನಾಟಕ ರಾಜ್ಯದ ರಾಜ್ಯಪಾಲರೂ ಆಗಿರುವ ಥಾವರ್‌ಚಂದ್ ಗೆಹ್ಲೋಟ್ ಪದಕ ಮತ್ತು ಪ್ರಮಾಣಪತ್ರಗಳನ್ನು ವಿತರಿಸಿದರು.

ಘಟಿಕೋತ್ಸವ ಸಮಾರಂಭದಲ್ಲಿ ಗೌರವಾನ್ವಿತ ಸಮಕುಲಾಧಿಪತಿಗಳು ಹಾಗೂ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ ಮತ್ತು ನವದೆಹಲಿಯ ಇಂಡೋ ಫ್ರೆಂಚ್ ಸೆಂಟರ್ ಫಾರ್ ಪ್ರಮೋಷನ್ ಆಫ್ ಅಡ್ವಾನ್ಸ್ಡ ರಿಸರ್ಚ್ ಸಂಸ್ಥೆಯ ನಿರ್ದೇಶಕರಾದ ಪ್ರೊ. ನಿತಿನ್ ಶೇಠ್, ಕ.ವಿ.ವಿ. ಕುಲಪತಿ ಪ್ರೊ. ಕೆ.ಬಿ. ಗುಡಸಿ, ಕುಲಸಚಿವ ಪ್ರೊ. ಸಿ.ಕೃಷ್ಣಮೂರ್ತಿ, ಪ್ರೊ. ಚಂದ್ರಮ್ಮ ಎಂ.ಮತ್ತಿತರೆ ಮುಂತಾದವರು ಉಪಸ್ಥಿತರಿದ್ದರು.

ಗದಗ ಜಿಲ್ಲೆಯ ಮತ್ತು ಬಸವ ಯೋಗ ಕೇಂದ್ರದ ಕೀರ್ತಿಯನ್ನು ಹೆಚ್ಚಿಸಿರುವ ಗೀತಾ ಸಾವಕಾರ ಇವರಿಗೆ ಎಡೆಯೂರು ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠ ಡಂಬಳ-ಗದಗ ಪೀಠಾಧಿಪತಿಗಳಾದ ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮಮಹಾಸ್ವಾಮಿಗಳು, ವಿ.ಪ ಸದಸ್ಯರಾದ ಪ್ರೊ. ಎಸ್.ವಿ. ಸಂಕನೂರ, ಜೆ.ಟಿ. ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟಿ, ಪ್ರಾಚಾರ್ಯ ಕೆ.ಎಸ್. ಪಲ್ಲೇದ, ಸಿಬ್ಬಂದಿ ವರ್ಗ ಹಾಗೂ ಹಿತೈಷಿಗಳು ಶುಭ ಹಾರೈಸಿದ್ದಾರೆ.

## ಹಾನಿಗೀಡಾದ ರೈತರ ಜಮೀನುಗಳ ಪರಿಶೀಲನೆ ನಡೆಸಿದ ಶಾಸಕ ಸಿ.ಸಿ. ಪಾಟೀಲ

# ಕಾಂಗ್ರೆಸ್ ಸರಕಾರ ಸಂಕಷ್ಟದಲ್ಲಿರುವ ರೈತರಿಗೂ ಭಾಗ್ಯ ನೀಡಲಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ರಾಜ್ಯದಲ್ಲಿ ಭೀಕರ ಬರಗಾಲ ತಾಂಡವವಾಡುತ್ತಿದ್ದು, ಸಕಾಲಕ್ಕೆ ಮಳೆ ಬಾರದೆ ಇದ್ದುದರಿಂದ ಜಿಲ್ಲೆಯಲ್ಲೂ ಸಹ ಬರಗಾಲದ ಛಾಯೆ ಆವರಿಸಿದೆ. ಸಿಎಂ ಸಿದ್ದರಾಮಯ್ಯ ಅವರು ಉಳಿದ ಭಾಗ್ಯಗಳಂತೆ ಸಂಕಷ್ಟದಲ್ಲಿರುವ ರೈತರಿಗೂ ಸಹ ಭಾಗ್ಯ ನೀಡಲಿ ಎಂದು ಶಾಸಕ ಸಿ.ಸಿ.ಪಾಟೀಲ ಹೇಳಿದರು.



> ಮಾಜಿ ಸಚಿವ ಬಿ.ಶ್ರೀರಾಮುಲು ಮಾತನಾಡಿ, ಸರಕಾರದ ಗಮನ ಸೆಳೆಯುವ ಉದ್ದೇಶದಿಂದ ಹಾಗೂ ರೈತರಿಗೆ ಶಕ್ತಿ ತುಂಬುವುದಕ್ಕಾಗಿ ಪಕ್ಷದ ವತಿಯಿಂದ ಬರ ಅಧ್ಯಯನ ನಡೆಸುತ್ತಿದ್ದೇವೆ. ಜಿಲ್ಲೆಯಲ್ಲಿ ಈಗಾಗಲೇ 11 ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಾಜ್ಯ ಸರಕಾರ ಈ ಕೂಡಲೇ 3 ಸಾವಿರ ಕೋಟಿ ರೂ ಬರ ಪರಿಹಾರವನ್ನು ಬಿಡುಗಡೆ ಮಾಡಬೇಕು. ಪ್ರತಿಯೊಂದಕ್ಕೂ ಕೇಂದ್ರದ ಕಡೆಗೆ ಬೊಟ್ಟು ಮಾಡುವುದು ಎಷ್ಟು ಸರಿ? ಗ್ಯಾರಂಟಿಗಳ ನಿರ್ವಹಣೆ ಸರಿಯಾಗಿ ಆಗುತ್ತಿಲ್ಲ. ಇಂತಹ ಸಂದರ್ಭದಲ್ಲಿ ಸಿಎಂ, ಡಿಸಿಎಂ ಡ್ಯಾನ್ಸ್ ಪ್ರ್ಯಾಕ್ಟೀಸ್ ಮಾಡುತ್ತಿದ್ದಾರೆ. ಅವರು ಆಸಕ್ತಿಯಿಂದ ಕುಣಿಯುತ್ತಿದ್ದರೆ ನಮ್ಮದೇನೂ ಅಭ್ಯಂತರವಿಲ್ಲ. ಆದರೆ ರೈತರ ಬಗ್ಗೆಯೂ ಸಹ ಆಸಕ್ತಿಯನ್ನು ಹೊಂದಬೇಕೆನ್ನುವುದು ನಮ್ಮ ಒತ್ತಾಯವಾಗಿದೆ ಎಂದರು.

ಅವರು ಶನಿವಾರ ರಾಜ್ಯ ಬಿಜೆಪಿ ಘಟಕದ ವತಿಯಿಂದ ಶಿರಹಟ್ಟಿ ತಾಲೂಕಿನ ಶೆಟ್ಟಿಕೇರಿ ಕ್ರಾಸ್ ಹತ್ತಿರ ಬರಗಾಲದಿಂದ ಹಾನಿಗೀಡಾದ ರೈತರ ಜಮೀನುಗಳಿಗೆ ತೆರಳಿ, ಪರಿಶೀಲನೆ ನಡೆಸಿ ಮಾತನಾಡಿದರು.

ರಾಜ್ಯ ಘಟಕದ ನಿರ್ದೇಶನದಂತೆ ಮಾಜಿ ಸಚಿವ ಬಿ.ಶ್ರೀರಾಮುಲು ನೇತೃತ್ವದಲ್ಲಿ ಬರ ಅಧ್ಯಯನ ನಡೆಸಲಾಗುತ್ತಿದೆ. ಮುಂಬರುವ ಅಧಿವೇಶನದಲ್ಲಿ ಈ ಬಗ್ಗೆ ಬಿಜೆಪಿ ಸದನದಲ್ಲಿ ಸುದೀರ್ಘ ಚರ್ಚೆಯನ್ನು ನಡೆಸಲಿದೆ. ಜಿಲ್ಲೆಯಲ್ಲಿ ಅಧಿಕಾರಿಗಳು ಮುಂಗಾರು 400 ಕೋಟಿ ರೂ ಹಾಗೂ ಹಿಂಗಾರು 120 ಕೋಟಿ ರೂ ಹಾನಿಯಾಗಿರುವ ಬಗ್ಗೆ ವರದಿ ನೀಡಿದ್ದಾರೆ. ಆದರೆ ಸರಕಾರ 10 ಕೋಟಿರೂ ಮಾತ್ರ ಬಿಡುಗಡೆ ಮಾಡಿದೆ. ರಾಜ್ಯ ಸರಕಾರ ತನ್ನ ಜವಾಬ್ದಾರಿಯನ್ನು ಅರಿತು ಕೆಲಸ ಮಾಡಬೇಕು. ಪ್ರತಿಯೊಂದಕ್ಕೂ ಕೇಂದ್ರ ಸರಕಾರದ ಕಡೆಗೆ ಬೊಟ್ಟು ಮಾಡುವುದನ್ನು ಬಿಡಬೇಕು. ಗ್ಯಾರಂಟಿಗಳ ನೆಪದಲ್ಲಿ ಒಂದು ಅಭಿವೃದ್ಧಿ ಕೆಲಸ ಇಲ್ಲ. ಈ ಹಿಂದೆ ಬಿಜೆಪಿ ಸರಕಾರದ ಅವಧಿಯಲ್ಲಿ ರೈತರಿಗೆ ನೀಡುತ್ತಿದ್ದ ಫಸಲ್ ಭೀಮಾ ಯೋಜನೆ ಸ್ಥಗಿತಗೊಳಿಸಿದ್ದಾರೆ. ಈ ಬಗ್ಗೆ ರಾಜ್ಯ ಘಟಕದ ವತಿಯಿಂದ ನಡೆಸಿದ ವರದಿಯನ್ನು ಕೇಂದ್ರ ಸರಕಾರಕ್ಕೆ ಸಲ್ಲಿಸಲಾಗುವುದು ಎಂದರು.

ನವಲಗುಂದ ಶಾಸಕ ಎನ್.ಎಚ್. ಕೋನರೆಡ್ಡಿ ಅವರು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಹಾರ್ಟ್ ಅಟ್ಯಾಕ್ ಬಗ್ಗೆ ಅಪಹಾಸ್ಯ ಮಾಡಿದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಅಧಿಕಾರದ ದಾಹದಿಂದ ಹೀಗೆ ಮಾತನಾಡಿರುವುದು ಸರಿಯಲ್ಲ ಎಂದು ಸಿ.ಸಿ. ಪಾಟೀಲ ಹೇಳಿದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರ, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ಕಳಕಪ್ಪ ಬಂಡಿ, ಡಾ. ಭೀಮಸಿಂಗ್ ರಾಠೋಡ, ರಾಜು ಕುರಡಗಿ, ಉಷಾ ದಾಸರ, ರವಿ ದಂಡಿನ, ಮುತ್ತಣ್ಣ ಲಿಂಗನಗೌಡರ, ಸಿದ್ರಾಮಪ್ಪ ಮೊರಬದ, ಫಕ್ಕೀರೇಶ ರಟ್ಟಿಹಳ್ಳಿ, ನಾಗರಾಜ ಲಕ್ಕುಂಡಿ, ಶರಣು ಅಂಗಡಿ, ಸಂತೋಷ ಓಬಾಜಿ, ಗಂಗಾಧರ ಮೆಣಸಿನಕಾಯಿ, ಪ್ರಕಾಶ ನಾಯ್ಕರ, ಅಶೋಕ ಪಲ್ಲೇದ, ದುಂಡೇಶ ಕೊಟಗಿ, ತಿಮ್ಮರಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ಜಾನು ಲಮಾಣಿ, ಕೊಟ್ರೇಶ ಸಜ್ಜನರ, ರಾಜೀವರೆಡ್ಡಿ ಬಮ್ಮನಕಟ್ಟಿ, ಯಲ್ಲಪ್ಪ ಇಂಗಳಗಿ, ಥಾವರೆಪ್ಪ ಲಮಾಣಿ, ಸಂದೀಪ ಕಪ್ಪತ್ತನವರ, ನಂದಾ ಪಲ್ಲೇದ, ಮುತ್ತು ಚಕ್ರಸಾಲಿ, ಶ್ರೀನಿವಾಸ ಬಾರಬಾರ, ಅಶೋಕ ವರವಿ ಮುಂತಾದವರು ಉಪಸ್ಥಿತರಿದ್ದರು.

## ಕನ್ನಡ ಸಂಭ್ರಮ-50

# ಕುಮಾರವ್ಯಾಸ ಕಂಬ ವೀಕ್ಷಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ









■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರೈಸಿದರ ಹಿನ್ನಲೆಯಲ್ಲಿ ಶುಕ್ರವಾರದಂದು ಗದುಗಿನ ದಿ.ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಕನ್ನಡ ಸಂಭ್ರಮ-50 ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೂ ಮುನ್ನ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ, ಗದುಗಿನ ವೀರನಾರಾಯಣ ದೇವಸ್ಥಾನದಲ್ಲಿನ ಕುಮಾರವ್ಯಾಸ ಕಂಬವನ್ನು ವೀಕ್ಷಿಸಿದರು. ತದನಂತರ ತಾಳೆಗರಿಗಳನ್ನು ದೂರದರ್ಶಕದ ಮೂಲಕ ವೀಕ್ಷಿಸಿ ವಿಶೇಷ ಪೂಜೆಯನ್ನು ನೆರವೇರಿಸಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ವೈದ್ಯಕೀಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಸೇರಿದಂತೆ ಸಚಿವರುಗಳು, ಗಣ್ಯರು ಉಪಸ್ಥಿತರಿದ್ದರು.

## ಕರ್ನಾಟಕ ನಾಮಕರಣಗೊಂಡು 50 ವರ್ಷ ಪೂರೈಸಿದರ ಹಿನ್ನಲೆಯಲ್ಲಿ ಶುಕ್ರವಾರದಂದು ಗದಗನಲ್ಲಿ ಜರುಗಿದ ಸಂಭ್ರಮಾಚರಣೆಯ ವಿಶೇಷ ಛಾಯಾಚಿತ್ರಗಳು




















VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka